MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

YUVA MARGA NEWS PAPER
VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 225 | ಶನಿವಾರ : 21-06-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 225 | SATURDAY : 21-06-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಕಾಂಗ್ರೆಸ್ ಸರ್ಕಾರದ ಪಾಪದ ಕೊಡ ತುಂಬಿದೆ : ಯಡಿಯೂರಪ್ಪ ಆಕ್ರೋಶ

**ಬೆಂಗಳೂರು,ಜೂ.20–** ಸರ್ಕಾರದ ಯೋಜನೆಗಳು ಅನುಷ್ಠಾನವಾಗಬೇಕಾದರೆ ಹಣ ನೀಡಲೇಬೇಕಾದ ದುಸ್ಥಿತಿ ರಾಜ್ಯದಲ್ಲಿ ನಿರ್ಮಾಣವಾಗಿದ್ದು, ಕಾಂಗ್ರೆಸ್‌ನ ಪಾಪದ ಕೊಡ ತುಂಬಿದೆ. ಜನತೆ ಶೀಘ್ರದಲ್ಲೆ ಉತ್ತರ ಕೊಡಲಿದ್ದಾರೆ ಎಂದು ಮಾಜಿ ಸಿಎಂ ಯಡಿಯೂರಪ್ಪ ಆಕ್ರೊಶ ವ್ಯಕ್ತಪಡಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರದಲ್ಲಿ ಹಣ ನೀಡದಿದ್ದರೆ ಯೋಜನೆಗಳು ಅನುಷ್ಠಾನಗೊಳ್ಳುವುದಿಲ್ಲ. ಫಲಾನುಭವಿಗಳು ಇಂತಿಷ್ಟು ಕಮೀಷನ್ ನೀಡಿದರೆ ಮಾತ್ರ ಕಾರ್ಯರೂಪಕ್ಕೆ ಬರುತ್ತದೆ. ರಾಜ್ಯದಲ್ಲಿರುವುದು ಅತ್ಯಂತ ಭ್ರಷ್ಟ ಸರ್ಕಾರ ಎಂದು ಕಿಡಿಕಾರಿದರು.

ಭ್ರಷ್ಟಾಚಾರದಿಂದ ಜನತೆ ರೋಸಿ ಹೋಗಿದ್ದಾರೆ. ಯಾವಾಗ ಈ ಸರ್ಕಾರ ತೊಲಗುತ್ತದೆಯೋ ಎಂದು ಕಾದು ಕುಳಿತಿದ್ದಾರೆ. ಸಹನೆಯ ಕಟ್ಟೆ ಒಡೆಯುವ ಮುನ್ನ ಎಚ್ಚೆತ್ತುಕೊಳ್ಳದಿದ್ದರೆ ಕಾಂಗ್ರೆಸ್‌ಗೆ ಉಳಿಗಾಲವಿಲ್ಲ ಎಂದು ಎಚ್ಚರಿಕೆ ಕೊಟ್ಟರು. ರಾಜ್ಯ ಸರ್ಕಾರದಲ್ಲಿ ಭ್ರಷ್ಟಾಚಾರ ತಾಂಡವವಾಡುತ್ತಿದೆ. ಬಹುತೇಕ ಅಭಿವೃದ್ಧಿ ಕಾರ್ಯಗಳು ಸ್ಥಗಿತಗೊಂಡಿದೆ. ಜನರ ಸಂಕಷ್ಟ ಕೇಳೋರಿಲ್ಲ. ತುಘಲಕ್ ಸರ್ಕಾರ ರಾಜ್ಯದಲ್ಲಿದೆ. ಕಾಂಗ್ರೆಸ್‌ನವರು ಪ್ರಚಾರದಲ್ಲಿ ತೊಡಗಿಸಿಕೊಂಡಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಸರ್ಕಾರ ಅಭಿವೃದ್ಧಿ ಕಡೆ ಗಮನ ಕೊಡುತ್ತಿಲ್ಲ. ಅಲ್ಪಸಂಖ್ಯಾತರ ತೃಪ್ತಿಪಡಿಸುವ ಕೆಲಸದಲಷ್ಟೆ ತೊಡಗಿದೆ. ವೋಟ್ ಬ್ಯಾಂಕ್ ರಾಜಕಾರಣ ಮಾಡುತ್ತಿದೆ ಎಂದು ದೂರಿದರು.

ಬಿ.ಆರ್.ಪಾಟೀಲ್ ಆಡಿಯೋ ವೈರಲ್ ವಿಚಾರದ ಕುರಿತು ಮಾತನಾಡಿದ ಬಿಎಸ್‌ವೈ, ಪಾಟೀಲ್ ಹೇಳಿರುವುದು ಸತ್ಯ. ಹಣ ನೀಡದೇ ಯಾವ ಕೆಲಸವೂ ಆಗುವುದಿಲ್ಲ ಎಂದು ಅವರ ಪಕ್ಷದ ಶಾಸಕರೇ ಹೇಳುತ್ತಿದ್ದಾರೆ. ಸರ್ಕಾರ ತನ್ನ ತಪ್ಪನ್ನು ಸರಿಪಡಿಸಿಕೊಳ್ಳಬೇಕು ಎಂದು ಹೇಳಿದರು.

ಜೆಡಿಎಸ್ ರಾಜ್ಯ ಪ್ರವಾಸದ ಕುರಿತು ಮಾತನಾಡಿದ ಅವರು, ಜೆಡಿಎಸ್ ಪ್ರವಾಸವನ್ನ ಸ್ವಾಗತಿಸುತ್ತೆನೆ. ಜೆಡಿಎಸ್ ಬೇರೆ ಅಲ್ಲ ಬಿಜೆಪಿ ಬೇರೆ ಅಲ್ಲ ಎಂದು ದೇವೇಗೌಡರು ಅನೇಕ ಬಾರಿ ಹೇಳಿದ್ದಾರೆ. ಮೋದಿ ನಾಯಕತ್ವದ ಬಗ್ಗೆ ವಿಶ್ವಾಸ ಇಟ್ಟಿದ್ದಾರೆ. ರಾಜ್ಯದಲ್ಲಿ ಈ ಸರ್ಕಾರವನ್ನು ತೊಲಗಿಸಬೇಕು ಅದಕ್ಕಾಗಿ ಒಟ್ಟಾಗಿ ಕೆಲಸ ಮಾಡುತ್ತೆವೆ ಎಂದರು. ಭಿನ್ನರ ಕರೆದು ಪ್ರಹ್ಲಾದ್ ಜೋಶಿ ಮಾತಾಡಿದ ವಿಚಾರವಾಗಿ ಪ್ರತಿಕ್ರಿಯಿಸುತ್ತಾ, ಜೋಶಿ ಪ್ರಯತ್ನ ಸ್ವಾಗತಾರ್ಹ.ಅಸಮಾಧಾನಿತರ ಜೊತೆ ನಾನು ಮಾತನಾಡಲು ಸಿದ್ದ. ಪ್ರತಿನಿತ್ಯ ಬಿಜೆಪಿ ಕಚೇರಿಗೆ ಬರುತ್ತೆನೆ. ವಾರಕ್ಕೊಮ್ಮೆ ಜಿಲ್ಲೆಗಳಿಗೆ ಹೋಗುತ್ತೆನೆ. ಇದರಿಂದ ಅಭಿವೃದ್ಧಿ ಕೆಲಸಕ್ಕೂ ಅನುಕೂಲವಾಗಲಿದೆ ಎಂದು ಹೇಳಿದರು.



ಕೇಂದ್ರದಿಂದಲೇ ಟಿಕೆಟ್ ತರುವೆ ಎಂಬ ಎಚ್.ಡಿ.ಕುಮಾರಸ್ವಾಮಿ ಹೇಳಿಕೆ ವಿಚಾರಕ್ಕೆ ಪ್ರತಿಕ್ರಯಿಸಿದ ಯಡಿಯೂರಪ್ಪ, ಕುಮಾರಸ್ವಾಮಿ ಹೇಳಿಕೆಗೆ ಭಿನ್ನಾಭಿಪ್ರಾಯವಿಲ್ಲ. ಅವರ ಹೇಳಿಕೆಯಲ್ಲಿ ಯಾವುದೇ ತಪ್ಪಿಲ್ಲ. ಕೇಂದ್ರ ಸಚಿವರಾಗಿ ಅವರು ಮಾತಾಡಿದ್ದಾರೆ. ಎಲ್ಲರೂ ಒಟ್ಟಾಗಿ ಹೋಗ್ತೆವೆ ಎಂಬ ಅರ್ಥದಲ್ಲಿ ಹೇಳದ್ದಾರಷ್ಟೆ ಎಂದು ಗೊಂದಲಕ್ಕೆ ತೆರೆ ಎಳೆಯುವ ಪ್ರಯತ್ನ ಮಾಡಿದರು.

### 936 ಕೋಟಿ ರೂ ವೆಚ್ಚದ ಕಾಮಗಾರಿಗಳಿಗೆ ಶಂಕುಸ್ಥಾಪನೆ, ಉದ್ಘಾಟನೆ

## ಜೂನ್ 23ಕ್ಕೆ ರಾಯಚೂರಲ್ಲಿ ಮುಖ್ಯಮಂತ್ರಿಗಳ ಕಾರ್ಯಕ್ರಮ

**ಯುವ ಮಾರ್ಗ ಸುದ್ದಿ**

**ರಾಯಚೂರ,ಜೂ.20–** ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರಿಂದ ಜೂನ್ 23ರಂದು ರಾಯಚೂರ ಗ್ರಾಮೀಣ ವಿಧಾನಸಭಾ ಕ್ಷೇತ್ರದಲ್ಲಿ ನಾನಾ ಕಾಮಗಾರಿಗಳಿಗೆ ಶಂಕುಸ್ಥಾಪನೆ ಮತ್ತ ಅಡಿಗಲ್ ಸಮಾರಂಭದ ಜೊತೆಗೆ 371 ಜೆ ದಶಮಾನೋತ್ಸವ ಮತ್ತು ಬುಡಕಟ್ಟು ಉತ್ಸವ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಲು ರಾಯಚೂರ ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ ಹಾಗೂ ಶ್ರೀಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ದಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಜಂಟಿ ಪತ್ರಿಕಾಗೋಷ್ಠಿ ನಡೆಸಿದರು. ಶಾಸಕರ ಕಚೇರಿ ಆವರಣದಲ್ಲಿ ಬೆಳಗ್ಗೆ ನಡೆದ ಪತ್ರಿಕಾಗೋಷ್ಠಿಯಲ್ಲಿ ಸಂಸದರಾದ ಜಿ.ಕುಮಾರ ನಾಯಕ ಅವರು ಮಾತನಾಡಿ, ಸಂವಿಧಾನದ ಅನುಚ್ಛೇದ 371 (ಜೆ) ಕಾಯಿದೆ ಅನುಷ್ಠಾನದಿಂದಾಗಿ ಈ ಭಾಗದವರಿಗೆ ಉದ್ಯೋಗ ಮತ್ತು ಶಿಕ್ಷಣದಲ್ಲಿ ಮೀಸಲು ಸೌಕರ್ಯ ಲಭ್ಯವಾಗಿ ನಮ್ಮಭಾಗದಲ್ಲಿ ಬಹುದೊಡ್ಡ ಕ್ರಾಂತಿಯಾಗುತ್ತಿದೆ. ಕೆಕೆಆರ್ ಡಿಬಿ ಅಡಿಯಲ್ಲಿ ಇದುವರೆಗೆ 13,000 ಕೋಟಿ ರೂ ಅನುದಾನ ನೀಡಲಾಗಿದೆ. ಇದನ್ನು ಸಂಭ್ರಮಿಸಲಿಕ್ಕೆ ದಶವಾನೋತ್ಸವ ಕಾರ್ಯಕ್ರಮ ಮಾಡು ತ್ತಿದ್ದೇವೆ. ಜೊತೆಗೆ ರಾಯಚೂರ ಗ್ರಾಮೀ ಣ ಕ್ಷೇತ್ರದಲ್ಲಿ ಅಂದಾಜು 936 ಕೋಟಿ ರೂ ವೆಚ್ಚದಲ್ಲಿ ಅನೇಕ ಅಭಿವೃದ್ಧಿ ಕಾಮಗಾ ರಿಗಳಿಗೆ ಅಡಿಗಲ್ಲು ಮತ್ತು ಉದ್ಘಾಟನೆಯು ಮಾನ್ಯ ಮುಖ್ಯಮಂತ್ರಿಗಳಿಂದ ನೆರವೇರ ಲಿದೆ ಎಂದು ತಿಳಿಸಿದರು.



ಶಾಸಕರಾದ ಬಸನಗೌಡ ದದ್ದಲ್ ಅವರು ಮಾತನಾಡಿ, ಜೂನ್ 23ರಂದು ನಡೆಯುವ ಕಾರ್ಯಕ್ರಮವು ರಾಯಚೂರ ಗ್ರಾಮೀಣ ವಿಧಾನಸಭಾ ಕ್ಷೇತ್ರದಲ್ಲಿ ಹೊಸ ಇತಿಹಾಸ ಬರೆಯಲಿದೆ. ಮಾನ್ಯ ಮುಖ್ಯಮಂತ್ರಿಗಳ ಜೊತೆಗೆ ಹಿರಿಯ ಮುಖಂಡರು ಕಾರ್ಯಕ್ರಮಕ್ಕೆ ಆಗಮಿಸಲಿದ್ದಾರೆ. ಅಂದು ಅಂದಾಜು 936 ಕೋಟಿ ರೂ. ವೆಚ್ಚದಲ್ಲಿ ನಾನಾ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ಹಾಗೂ ಉದ್ಘಾಟನೆ ನೆರವೇರಲಿದೆ ಎಂದರು.

ರಾಯಚೂರ ವಿವಿ ಆವರಣದಲ್ಲಿ ವಿಶೇಷ ಕಾರ್ಯಕ್ರಮವಿದೆ. ಆದಿಕವಿ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ ಎಂದು ರಾಯಚೂರ ವಿವಿಗೆ ಮರು ನಾಮಕರಣ ನಡೆಯಲಿದೆ. ಒಂದೂವರೆ ಕೋಟಿ ರೂ ವೆಚ್ಚದಲ್ಲಿ ರಾಯಚೂರ ವಿವಿ ಆವರಣದಲ್ಲಿ 6 ಎಕರೆ ಪ್ರದೇಶದಲ್ಲಿ ಹೊಸದಾಗಿ ಉದ್ಯಾನ ವನ 2ನೇ ಪುಟಕ್ಕೆ

## ವಿದ್ಯಾರ್ಥಿಗಳು ಉನ್ನತ ಮೌಲ್ಯಗಳನ್ನು ಬೆಳೆಸಿಕೊಳ್ಳಿ: ಡಾ. ಜೆ.ಎಲ್. ಈರಣ್ಣ

**ಯುವ ಮಾರ್ಗ ಸುದ್ದಿ**

**ಮಾನ್ವಿ,ಜೂ.20–**ಪಟ್ಟಣದ ಬಾಶುಮಿಯ ಸಾಹುಕಾರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ನಡೆದ ಬಿ.ಎ. ಪದವಿ ಅಂತಿಮ ವರ್ಷದ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭದಲ್ಲಿ, ಕಾಲೇಜಿನ ಪ್ರಾಂಶುಪಾಲರಾದ ಡಾ.ಜೆ.ಎಲ್. ಈರಣ್ಣ ಅವರು ವಿದ್ಯಾರ್ಥಿಗಳಿಗೆ ಕೇವಲ ಶಿಕ್ಷಣವಲ್ಲದೆ ಸಾಮಾಜಿಕ ಜವಾಬ್ದಾರಿ ಮತ್ತು ಜೀವನ ಮೌಲ್ಯಗಳನ್ನು ಕಲಿಸಲಾಗಿದೆ ಎಂದು ಹೇಳಿದರು. ವಿದ್ಯಾರ್ಥಿಗಳು ತಮ್ಮ ಮುಂದಿನ ಜೀವನದಲ್ಲಿ ಉತ್ತಮ ಸ್ಥಾನಮಾನದೊಂದಿಗೆ ಉತ್ತಮ ವ್ಯಕ್ತಿತ್ವ ಮತ್ತು ಸಾಮಾಜಿಕ ಮೌಲ್ಯಗಳನ್ನು ಬೆಳೆಸಿಕೊಳ್ಳಬೇಕು ಎಂದು ಅವರು ಕರೆ ನೀಡಿದರು.

ಇದೇ ಸಂದರ್ಭದಲ್ಲಿ ಮಾತನಾಡಿದ ಅರ್ಥಶಾಸ್ತ್ರ ಉಪನ್ಯಾಸಕ ವಿರುಪನಗೌಡ ಅವರು, ಕಾಲೇಜಿನಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಬೆಳವಣಿಗೆಗೆ ಪೂರಕವಾದ ವಾತಾವರಣವನ್ನು ಸೃಷ್ಟಿಸಲಾಗಿದೆ ಎಂದು ತಿಳಿಸಿದರು. ವಿದ್ಯಾರ್ಥಿಗಳು ಉಪನ್ಯಾಸಕರಿಂದ ಅಗತ್ಯ ಜ್ಞಾನವನ್ನು ಪಡೆದು ಉತ್ತಮ ಜೀವನ ರೂಪಿಸಿಕೊಳ್ಳುವಂತೆ ಕರೆ ನೀಡಿದರು. ಕಾರ್ಯಕ್ರಮದಲ್ಲಿ ಕನ್ನಡ ವಿಭಾಗದ ಉಪನ್ಯಾಸಕ ಡಾ. ಹುಲಿಗೆಪ್ಪ, ರಾಜ್ಯಶಾಸ್ತ್ರ ಮುಖ್ಯಸ್ಥರಾದ ಡಾ. ಬಸವರಾಜ ಕರಡಿಗುಡ್ಡ, ಉಪನ್ಯಾಸಕರಾದ ರಮ್ಯಾ, ಮಂಜುನಾಥ್ ದಂಡೆ, ಅಶ್ವಿನಿ, ನಿಂಗಪ್ಪ, ದೇವೇಂದ್ರಪ್ಪ, ಧನಂಜಯ್, ಶಾರದ ಇದ್ದರು.



## ಮುಖ್ಯಮಂತ್ರಿಗಳು ಆಗಮನ ಸಿದ್ಧತೆ ಪರಿಶೀಲಿಸಿದ ಶಾಸಕ ಬಸನಗೌಡ ದದ್ದಲ್



**ಯುವ ಮಾರ್ಗ ಸುದ್ದಿ**

**ರಾಯಚೂರ,ಜೂ.20–** ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಜೂನ್ 23ರಂದು ರಾಯಚೂರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡ ಹಿನ್ನೆಲೆಯಲ್ಲಿ ನಾನಾ ಕಾರ್ಯಕ್ರಮಗಳ ಸಿದ್ಧತೆಯ ಬಗ್ಗೆ ಶ್ರೀಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಕಾರ್ಯ ಕ್ರಮದ ಸ್ಥಳಗಳಿಗೆ ಖುದ್ದು ಭೇಟಿ ನೀಡಿ ಪರಿಶೀಲಿಸಿದರು.

ಆದಿಕವಿ ಶ್ರೀಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ ಎಂದು ಮರುನಾಮಕರಣ ಹಿನ್ನೆಲೆಯಲ್ಲಿ ಹಬ್ಬದ ರೀತಿಯಲ್ಲಿ ಸಿದ್ಧವಾಗುತ್ತಿರುವ ವಿಶ್ವ ವಿದ್ಯಾಲಯದ ಆವರಣದಲ್ಲಿನ ನಾನಾ ಸಿದ್ಧತಾ ಕಾರ್ಯಗಳನ್ನು ಪರಿಶೀಲಿಸಿದರು. ಬಳಿಕ ಶಾಸಕರು, ಹೆಲಿಪ್ಯಾಡ್ ಆವರಣಕ್ಕೆ ತೆರಳಿ ಅಲ್ಲಿನ ಸಿದ್ಧತೆ ಮತ್ತು ಸೂಕ್ತ ಭದ್ರತೆಯ ಬಗ್ಗೆ ಮಾಹಿತಿ ಪಡೆದುಕೊಂಡರು.

ಅಲ್ಲಿಂದ ಶಾಸಕರು, ಯರಗೇರಾ ಗ್ರಾಮಕ್ಕೆ ತೆರಳಿದರು. ಯರಗೇರಾ ಕ್ರಾಸ್ ಬಳಿಯಲ್ಲಿ, ಬೃಹತ್ ರೀತಿಯಲ್ಲಿ ಸಿದ್ಧವಾಗುತ್ತಿರುವ ಬುಡಕಟ್ಟು 2ನೇ ಪುಟಕ್ಕೆ

## ಸಚಿವ ಜಮೀರ್ ರಾಜೀನಾಮೆಗೆ ಆರ್. ಆಶೋಕ್ ಆಗ್ರಹ

**ಬೆಂಗಳೂರು,ಜೂ.20–** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕೂಡಲೇ ಸಚಿವ ಜಮೀರ್ ಅಹದ್ ಖಾನ್ ಅವರ ರಾಜೀನಾಮೆ ಪಡೆದು, ಶಾಸಕ ಬಿ.ಆರ್.ಪಾಟೀಲ್‌ರವರ ಮೊಬೈಲ್ ಕರೆ ಆಡಿಯೋ ಆಧಾರದ ಮೇಲೆ ಹೈಕೋರ್ಟ್ ನ್ಯಾಯಾಧೀಶರ ನೇತೃತ್ವದಲ್ಲಿ ನ್ಯಾಯಾಂಗ ತನಿಖೆಗೆ ಆದೇಶಿಸಿ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್. ಆಶೋಕ್ ಆಗ್ರಹಿಸಿದ್ದಾರೆ. ಈ ಕುರಿತು ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು, ಸ್ವಪಕ್ಷದ ಶಾಸಕರೇ ಭ್ರಷ್ಟಾಚಾರದ ಆರೋಪ ಮಾಡುತ್ತಿರುವಾಗ ವಸತಿ ಸಚಿವ ಜಮೀರ್ ಅಹದ್ ಖಾನ್ ಅವರಿಗೆ ತಮ ಸ್ಥಾನದಲ್ಲಿ ಮುಂದುವರೆಯುವ ಯಾವ ನೈತಿಕತೆ ಉಳಿದಿದೆ ಎಂದು ಪ್ರಶ್ನೆ ಮಾಡಿದ್ದಾರೆ.

ಕಾಂಗ್ರೆಸ್ ಸರ್ಕಾರ ಭ್ರಷ್ಟ ಸರ್ಕಾರ. ಕಾಂಗ್ರೆಸ್ ಸರ್ಕಾರದಲ್ಲಿ ಕರ್ನಾಟಕ ಭ್ರಷ್ಟಾಚಾರದಲ್ಲಿ ನಂಬರ್ 1 ಆಗಿದೆ ಎಂದು ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ ಕಾಂಗ್ರೆಸ್ ಶಾಸಕ ಬಸವರಾಜ ರಾಯರೆಡ್ಡಿ ನೀಡಿದ್ದ ಹೇಳಿಕೆಗೆ ಪುಷ್ಟಿ ನೀಡುವಂತೆ ಕಾಂಗ್ರೆಸ್ ಶಾಸಕ ಬಿ.ಆರ್. ಪಾಟೀಲ್ ಅವರು ಜಮೀರ್ ಅಹಮದ್ ಅವರ ಮೇಲೆ ಗಂಭೀರ ಆರೋಪ ಮಾಡಿದ್ದಾರೆ ಎಂದು ಆರೋಪಿಸಿದ್ದಾರೆ.

ಆಳಂದ ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು 950 ಮನೆಗಳನ್ನು ಲಂಚ ಪಡೆದು ಹಂಚಿಕೆ ಮಾಡಲಾಗಿದೆ ಎಂದು ಆರೋಪ ಮಾಡಿರುವ ಶಾಸಕ ಬಿ.ಆರ್.ಪಾಟೀಲ್ ಅವರು ತಮಲ್ಲಿರುವ ಭ್ರಷ್ಟಾಚಾರದ ಮಾಹಿತಿಯನ್ನು ಬಹಿರಂಗ ಪಡಿಸಿದರೆ ಸರ್ಕಾರವೇ ಅಲ್ಲಾಡುತ್ತದೆ ಎಂದು ಎಚ್ಚರಿಕೆ ನೀಡಿದ್ದಾರೆ ಎಂಬುದನ್ನು ಉಲ್ಲೆಖಿಸಿದ್ದಾರೆ.

ಶಾಸಕ ಬಿ.ಆರ್.ಪಾಟೀಲ್ ಅವರು ವಸತಿ ಇಲಾಖೆಯಲ್ಲಿ ನಡೆಯುತ್ತಿರುವ ಭ್ರಷ್ಟಾಚಾರ, ಲಂಚಗುಳಿತನದ ಬಗ್ಗೆ ತಮಗಿರುವ ಮಾಹಿತಿಯನ್ನು ಬಹಿರಂಗಪಡಿಸಬೇಕು ಮತ್ತು ಲೋಕಾಯುಕ್ತಕ್ಕೆ ದೂರು ಸಲ್ಲಿಸಬೇಕು. ಅವರಿಗೆ ಈ ವಿಷಯದಲ್ಲಿ ಬಿಜೆಪಿ ಸಂಪೂರ್ಣ ಬೆಂಬಲ ನೀಡಲಿದೆ ಎಂದು ಅಶೋಕ್ ಹೇಳಿದ್ದಾರೆ.

## ಇಂದು 11ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ

**ಯುವ ಮಾರ್ಗ ಸುದ್ದಿ**

**ರಾಯಚೂರು, ಜೂ.20–**ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಆಯುಷ್ ಇಲಾಖೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಂಯುಕ್ತ ಆಶ್ರಯದಲ್ಲಿ 11ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮವು ಜೂನ್ 21ರಂದು ಬೆಳಗ್ಗೆ 6.30ಕ್ಕೆ ರಾಯಚೂರಿನಲ್ಲಿ ವಿಜೃಂಭಣೆಯಿಂದ ಆಯೋಜಿಸಲಾಗಿದೆ.

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ ಆರ್. ಪಾಟೀಲ್ ಅವರು ಉದ್ಘಾಟಿಸುವರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಾದ ದಿನೇಶ್ ಗುಂಡೂರಾವ್ ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್. ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು.

ರಾಯಚೂರು ನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ.ಶಿವರಾಜ್ ಎಸ್ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮೀಣ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿಯ ಅಧ್ಯಕ್ಷರು ಆಗಿರುವ ಮಸ್ಕಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಆರ್. ಬಸನಗೌಡ ತುರವಿಹಾಳ, ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರ ವಿಧಾನಸಭಾ ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸದಸ್ಯರಾದ ರಾಜಶೇಖರ 2ನೇ ಪುಟಕ್ಕೆ

## ತಂದೆ– ತಾಯಿಗಳೇ ನಿಜವಾದ ದೇವರು : ಗಣಾಚಾರಿ



**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಜೂ.20–** ತಂದೆ–ತಾಯಿಯೇ ನಿಜವಾದ ದೇವರು. ಎಂದಿಗೂ ಅವರ ಮನಸ್ಸನ್ನು ನೋಯಿಸಬಾರದು. ಅವರ ಸೇವೆ ಮಾಡುವುದರಿಂದ ಮನಸ್ಸು ಪ್ರಪುಲ್ಲವಾಗುತ್ತದೆ. ಆತ್ಮಕ್ಕೆ ಶಾಂತಿ ದೊರೆಯುತ್ತದೆ ಎಂದು ಉಮಾಮಹೇಶ್ವರಿ ಕಾಲೇಜಿನ ಆಡಳಿತ ಅಧಿಕಾರಿ ವಿನಯ ಕುಮಾರ ಗಣಾಚಾರಿ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಪಟ್ಟಣದ ಉಮಾಮಹೇಶ್ವರಿ ಪದವಿ ಪೂರ್ವ ಕಾಲೇಜಿನಲ್ಲಿ ಪ್ರಥಮ ಪಿಯುಸಿ ವಿದ್ಯಾರ್ಥಿಗಳಿಗೆ ತರಗತಿ ಪ್ರಾರಂಭತ್ಸೋವ ಹಾಗೂ ಸರಸ್ವತಿ ಪೂಜಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ತಾಯಿ ನಮ್ಮನ್ನು ಭೂಮಿಗೆ ತಂದರೆ, ತಂದೆ ಇಡೀ ಜಗತ್ತನ್ನು ನಮಗೆ ಪರಿಚಯಿಸುತ್ತಾನೆ, ನಿಮ್ಮ ಭವಿಷ್ಯಕ್ಕಾಗಿ ತಂದೆ ತನ್ನದೆಲ್ಲವನ್ನೂ ತ್ಯಾಗ ಮಾಡಿ ನಿಮ್ಮನ್ನು ಸಮಾಜದಲ್ಲಿ ಒಬ್ಬ ದೊಡ್ಡ ವ್ಯಕ್ತಿಯನ್ನಾಗಿಸುತ್ತಾನೆ.

ಅವರ ಶ್ರಮ ಸಾರ್ಥಕ 2ನೇಪುಟಕ್ಕೆ

ಮೊದಲನೇಯ ಪುಟದಿಂದ

# ಜೂನ್ 23ಕ್ಕೆ ರಾಯಚೂರಲ್ಲಿ ಮುಖ್ಯಮಂತ್ರಿಗಳ ಕಾರ್ಯಕ್ರಮ

ನಿರ್ಮಾ ಣವಾಗಲಿದೆ ಎಂದರು.ಕಾರ್ಯಕ್ರಮದ ಸಿದ್ಧತೆಯು ಭರ್ಜರಿ ನಡೆದಿದೆ. ಒಂದೆಡೆಬುಡಕಟ್ಟು ಉತ್ಸವದ ಮಳಿಗೆಗಳ ನಿರ್ಮಾಣ ಕಾರ್ಯ ಮತ್ತೊಂದೆಡೆ ಫಲಾನುಭವಿಗಳಿಗೆ ಸೌಲಭ್ಯ ವಿತರಣೆಯ ಮಳಿಗೆಗಳ ನಿರ್ಮಾಣ ಕಾರ್ಯ ನಡೆಯುತ್ತಿದೆ. ಬುಡಕಟ್ಟು ಸಮುದಾಯವರ ಕರಕುಶಲ ವಸ್ತುಗಳ ಪ್ರದರ್ಶನಕ್ಕೆ ಮತ್ತು ಅವರ ಕಲೆಗಳ ಅನಾವರಣಕ್ಕೆ ಉತ್ಸವದಲ್ಲಿ ಏರ್ಪಾಡು ಮಾಡಲಾಗಿದೆ ಎಂದರು.

ಅಂಬೇಡ್ಕರ್ ಅಭಿವೃದ್ಧಿ ನಿಗಮ, ಆದಿಜಾಂಬವ ನಿಗಮ, ಬೋವಿ ನಿಗಮ, ಅಲ್ಪಸಂಖ್ಯಾತ ಕಲ್ಯಾಣ ಇಲಾಖೆ, ಬಿಸಿಎಂ ಇಲಾಖೆಗೆ ಸಂಬಂಧಿಸಿದ ನಾನಾ ಕಾರ್ಯಕ್ರಮಗಳಡಿ 100 ಫಲಾನುಭವಿಗಳಿಗೆ ಕಾರು, ಟ್ರಾಕ್ಟರ್ ಸೇರಿದಂತೆ ನಾನಾ ಸೌಲಭ್ಯ ವಿತರಣೆ ಕಾರ್ಯಕ್ರಮ ನಡೆಯಲಿದೆ. 60 ಜನ ಮಹಿಳೆಯರಿಗೆ ಹೊಲಿಗೆ ಯಂತ್ರಗಳನ್ನು ಇದೆ ವೇಳೆ ವಿತರಿಸಲಾಗುವುದು.ಇದೆ ವೇಳೆ ಸಂವಿಧಾನದ ಅನುಚ್ಛೇದ 371(ಜೆ) ದಶಮಾನೋತ್ಸವ ಕಾರ್ಯಕ್ರಮವು ವಿಭಿನ್ನವಾಗಿ ನಡೆಯಲಿದೆ. 371(ಜೆ) ಹೋರಾಟಗಾಥೆ, ಈ ಮೀಸಲು ಸೌಲಭ್ಯ ಪಡೆದು ಉದ್ಯೋಗ ಗಿಟ್ಟಿಸಿದ ನೌಕರರ ಯಶೋಗಾಥೆ ಮಾಹಿತಿಯ ಮತ್ತು ಹೋರಾಟದ ವಿಭಿನ್ನ ಛಾಯಾಚಿತ್ರಗಳು ಒಳಗೊಂಡ ಪುಸ್ತಕದ ಲೋಕಾರ್ಪಣೆ ನಡೆಯಲಿದೆ ಎಂದರು.

24 ಕೋಟಿ ರೂ ವೆಚ್ಚದಲ್ಲಿ 72 ಸರ್ಕಾರಿ ಶಾಲೆಗಳಲ್ಲಿ 185 ಹೆಚ್ಚುವರಿ ಶಾಲಾ ಕೊಠಡಿಗಳು, ಶೌಚಾಲಯ, ಬೋಜನಾಲಯ ನಿರ್ಮಾಣ ಕಾಮಗಾರಿಗೆ, 12 ಕೋಟಿ ರೂ ವೆಚ್ಚದಲ್ಲಿ 5 ಹೊಸ ಶಾಲಾ ಕಟ್ಟಡಗಳ ನಿರ್ಮಾಣಕ್ಕೆ,

6 ಕೋಟಿ ವೆಚ್ಚದಲಿ 27 ಸಮುದಾಯ ಭವನ ನಿರ್ಮಾಣ ಕಾಮಗಾರಿಗೆ, 48 ಕೋಟಿ ರೂ ವೆಚ್ಚದಲ್ಲಿ 98 ಸಿಸಿ ರಸ್ತೆ ಮತ್ತು ಚರಂಡಿ ನಿರ್ಮಾಣ ಕಾಮಗಾರಿಗಳಿಗೆ, 111 ಕೋಟಿ ರೂ ವೆಚ್ಚದಲ್ಲಿ 24 ಬಿಟಿ ರಸ್ತೆ ಕಾಮಗಾರಿಗಳಿಗೆ,

289 ಕೋಟಿ ರೂ ವೆಚ್ಚದಲ್ಲಿ 6 ಕೆರೆ ತುಂಬುವ ಯೋಜನೆ ಮತ್ತು ಏತ ನೀರಾವರಿ ಯೋಜನೆ ಕಾಮಗಾರಿಗೆ, 152 ಕೋಟಿ ರೂ ವೆಚ್ಚದಲ್ಲಿ 1 ಬ್ರಿಜ್ ಕಂ ಬ್ಯಾರೇಜ್ ಕಾಮಗಾರಿಗಳಿಗೆ, 21 ಕೋಟಿ ರೂ ವೆಚ್ಚದಲ್ಲಿ 218 ಹಳೆಯ ದೇವಾಲಯಗಳ ಜೀರ್ಣೋದ್ಧಾರ ಕಾಮಗಾರಿಗೆ, 3 ಕೋಟಿ ರೂ ವೆಚ್ಚದಲ್ಲಿ 12 ಚರ್ಚಗಳ ದುರಸ್ತಿ ಕಾಮಗಾರಿಗೆ, 2.83 ಕೋಟಿ ರೂ ವೆಚ್ಚದಲ್ಲಿ 35 ಮಸೀದಿ, ದರ್ಗಾ ಮತ್ತು ಆಶುರ್ ಖಾನ್ ಅಭಿವೃದ್ದಿ ಕಾಮಗಾರಿಗೆ,

222 ಕೋಟಿ ರೂ ವೆಚ್ಚದಲ್ಲಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆ ಕಾಮಗಾರಿಗೆ, 7 ಕೋಟಿ ರೂ ವೆಚ್ಚದಲ್ಲಿ 36 ಗ್ರಂಥಾಲಯಗಳ ನಿರ್ಮಾಣ ಕಾಮಗಾರಿಗೆ,3 ಕೋಟಿ ರೂ ವೆಚ್ಚದಲ್ಲಿ 12 ಗ್ರಾಮದಲ್ಲಿಸಮುದಾಯ ಶೌಚಾಲಯ ನಿರ್ಮಾಣ ಕಾಮಗಾರಿಗೆ, 7 ಕೋಟಿ ರೂ ವೆಚ್ಚದಲ್ಲಿ 2 ಸಮುದಾಯ ಆರೋಗ್ಯ ಕೇಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಆರೋಗ್ಯ ಉಪಕೇಂದ್ರ ಕಾಮಗಾರಿಗಳಿಗೆ, 48 ಕೋಟಿ ರೂ ವೆಚ್ಚದಲ್ಲಿ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವ ವಿದ್ಯಾನಿಲಯದಲ್ಲಿ ಜೆನೋಮ ಸೆಂಟರ್, ಉದ್ಯಾನವನ ಮತ್ತು ಬೋಧನಾ ಕೊಠಡಿ ಕಾಮಗಾರಿಗಳಿಗೆ, 40 ಲಕ್ಷ ರೂ ವೆಚ್ಚದಲ್ಲಿ ಪಶು ಆಸ್ಪತ್ರೆ, 2 ಕೋಟಿ ರೂ ವೆಚ್ಚದಲ್ಲಿ ಟ್ರಿ ಪಾರ್ಕ ನಿರ್ಮಾಣ ಕಾಮಗಾರಿ ಸೇರಿದಂತೆ ಇನ್ನಿತರ ಬೇರೆ ಬೇರೆ ಇಲಾಖೆಗಳ ಕಾಮಗಾರಿ ಒಳಗೊಂಡು ಅಂದಾಜು 936 ಕೋಟಿ ರೂ ವೆಚ್ಚದಲ್ಲಿ ನಾನಾ ಕಾಮಗಾರಿಗಳಿಗೆ ಮಾನ್ಯ ಮುಖ್ಯಮಂತ್ರಿಗಳು ಶಂಕುಸ್ಥಾಪನೆ ಮತ್ತು ಪೂರ್ಣಗೊಂಡ ಕಾಮಗಾರಿಗಳನ್ನು ಲೋಕಾರ್ಪಣೆ ಮಾಡಲಿದ್ದಾರೆ ಎಂದು ಶಾಸಕರು ವಿವರಿಸಿದರು.

ಪತ್ರಿಕಾಗೋಷ್ಠಿಯಲ್ಲಿ ವಿಧಾನ ಪರಿಷತ್ ಶಾಸಕರಾದ ಎ ವಸಂತಕುಮಾರ, ಮುಖಂಡರಾದ ಬಸವರಾಜಪಾಟಿಲಇಟಗಿ,ಮಲ್ಲಿಕಾರ್ಜುನ ಪಾಟೀಲ,ಅಬ್ದುಲ್ ಖರೀಂ,ರಜಾಕ್ ಉಸ್ತಾದ್,ಜಯಂತರಾವ್ ಪತಂಗೆ,ರಾಜಶೇಖರರಾಮಸ್ವಾಮಿ,ಅಸ್ಲಂ ಪಾಶಾ, ಚಂದ್ರಶೇಖರ ಪಾಟೀಲ,ನಾಗೇಂದ್ರಪ್ಪ ಮಟಮಾರಿ,ಪಂಪಾಪತಿ, ಚನ್ನಬಸು ನಾಯಕ ಸೇರಿದಂತೆ ಇತರರು ಇದ್ದರು.

# ಇಂದು 11ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ

ಹಿಟ್ನಾಳ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ. ನಮೋಶಿ, ಮಾನ್ವಿ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸೂಗೂರು ಶಾಸಕರಾದ ಮಾನಪ್ಪ ಡಿ. ವಜ್ಜಲ್, ವಿಧಾನ ಪರಿಷತ್ ಶಾಸಕರಾದ ಡಾ.ಚಂದ್ರಶೇಖರ ಬಿ. ಪಾಟೀಲ, ದೇವದುರ್ಗ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ್ ಬಯ್ಯಾಪೂರ, ಎ ವಸಂತಕುಮಾರ, ಬಸನಗೌಡ ಬಾದರ್ಲಿ, ಮಹಾನಗರ ಪಾಲಿಕೆಯ ಅಧ್ಯಕ್ಷರಾದ ನರಸಮ್ಮ ನರಸಿಂಹಲು ಮಾಡಗಿರಿ, ಎಪಿಎಂಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ರಾಯಚೂರ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ತಾಲೂಕು ಆಧ್ಯಕ್ಷರಾದ ಪವನ್ ಪಾಟೀಲ, ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಾದ ರಿತೇಶ್ ಕುಮಾರ್ ಸಿಂಗ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಾದ ಹರ್ಷ ಗುಪ್ತ, ಕಲಬುರಗಿ ಪ್ರಾದೇಶಿಕ ಆಯುಕ್ತರಾಧ ಕೃಷ್ಣಾ ಬಾಜಪೇಯಿ, ಆಯುಷ್ ಇಲಾಖೆಯ ಆಯುಕ್ತರಾದ ವಿಪಿನ್ ಸಿಂಗ್, ರಾಯಚೂರು ಜಿಲ್ಲಾಧಿಕಾರಿಗಳಾದ ಕೆ.ನಿತೀಶ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಪಾಂಡ್ವೆ ರಾಹುಲ್ ತುಕರಾಂ, ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಉಪಸ್ಥಿತರಿರುವರು ಎಂದು ಆಯುಷ್ ಇಲಾಖೆಯ ಜಿಲ್ಲಾ ಅಧಿಕಾರಿ ಡಾ.ಶಂಕರಗೌಡ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮುಖ್ಯಮಂತ್ರಿಗಳು ಆಗಮನ ಸಿದ್ಧತೆ ಪರಿಶೀಲಿಸಿದ ಶಾಸಕ ಬಸನಗೌಡ ದದ್ದಲ್

ಉತ್ಸವ ಹಾಗೂ 371 ಜೆ ದಶಮಾನೋತ್ಸವ ಮತ್ತು ರಾಯಚೂರ ಗ್ರಾಮೀಣ ಕ್ಷೇತ್ರ ವ್ಯಾಪ್ತಿಗೆ ಸಂಬಂಧಿಸಿದಂತೆ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಮತ್ತು ಉದ್ಘಾಟನಾ ಸಮಾರಂಭದ ಮುಖ್ಯ ವೇದಿಕೆಯ ಸಿದ್ಧತೆಯನ್ನು ಪರಿಶೀಲಿಸಿದರು.

ಈ ವೇಳೆ ಮಾತನಾಡಿದ ಶಾಸಕರು, ಮುಖ್ಯ ವೇದಿಕೆ ನಿರ್ಮಾಣ ಸೇರಿದಂತೆ ಎಲ್ಲಾ ಸಿದ್ಧತಾ ಕಾರ್ಯಗಳನ್ನು ವೇಗಗೊಳಿಸಲು ಸೂಚನೆ ನೀಡಿದರು. ವೇದಿಕೆ ನಿರ್ಮಾಣ ಸೇರಿದಂತೆ ಶಿಷ್ಠಾಚಾರ ಪಾಲನೆ ಹಾಗು ಇನ್ನಿತರೆ ಜವಾಬ್ದಾರಿ ವಹಿಸಿಕೊಂಡ ಅಧಿಕಾರಿಗಳು ಸ್ಥಳದಲ್ಲಿದ್ದು, ವೇದಿಕೆಯ ಮೇಲೆ ಮತ್ತು ಮುಂಭಾಗದಲ್ಲಿ ಗಣ್ಯರ ಆಸನದ ವ್ಯವಸ್ಥೆ, ಪತ್ರಿಕಾ ಗ್ಯಾಲರಿ, ಸಾರ್ವಜನಿಕರಿಗೆ ಆಸನ, ಪ್ರವೇಶ ದ್ವಾರ, ಗದ್ದಲ ಆಗದಂತೆ ಸೂಕ್ತ ಬ್ಯಾರಿಕೇಡ್ ವ್ಯವಸ್ಥೆ, ತಾತ್ಕಾಲಿಕ ಚಿಕಿತ್ಸಾ ವ್ಯವಸ್ಥೆ, ಕುಡಿಯುವ ನೀರು, ಉಪಹಾರ ಊಟದ ಗ್ಯಾಲರಿ ನಿರ್ಮಾಣ ಕಾರ್ಯಗಳು ಅಚ್ಚುಕಟ್ಟಾಗಿ ನಡೆಯುವಂತೆ ಶಾಸಕರು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಮುಖ್ಯ ವೇದಿಕೆಯ ಬಳಿ ಗದ್ದಲವಾಗದಂತೆ ವಾಹನಗಳಿಗೆ ಸೂಕ್ತ ಪಾರ್ಕಿಂಗ್, ತುರ್ತು ಸಂದರ್ಭದಲ್ಲಿ ಅಂಬುಲೆನ್ಸ್ ಸರಳವಾಗಿ ಮುಖ್ಯ ರಸ್ತೆಗೆ ಸಂಪರ್ಕಿಸಲು ಅನುಕೂಲವಾಗುವಂತೆ ಬ್ಯಾರಿಕೇಡ್ ಬಳಸಿ ಪ್ರತ್ಯೇಕ ಮಾರ್ಗ ನಿರ್ಮಾಣ ಸೇರಿದಂತೆ ಎಲ್ಲಾ ರೀತಿಯ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳುವಂತೆ ಇದೆ ವೇಳೆ ಶಾಸಕರು ಪೊಲೀಸ್ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ವೇಳೆ ವಿಧಾನ ಪರಿಷತ್ ಶಾಸಕರಾದ ಎ ವಸಂತಕುಮಾರ, ಮುಖಂಡರಾದ ಬಸವರಾಜ ಪಾಟೀಲ ಇಟಗಿ, ರಜಾಕ್ ಉಸ್ತಾದ್, ಮಲ್ಲಿಕಾರ್ಜುನ ಗೌಡ ತಲಮಾರಿ, ಅಸ್ಲಂ ಪಾಶಾ ಸೇರಿದಂತೆ ಇನ್ನಿತರ ಮುಖಂಡರು, ವಿವಿಧ ಇಲಾಖೆಯ ಅಧಿಕಾರಿಗಳು ಮತ್ತು ಯರಗೇರಾ ಗ್ರಾಮದ ಪ್ರಮುಖರು ಇದ್ದರು.

# ತಂದೆ– ತಾಯಿಗಳೇ ನಿಜವಾದ ದೇವರು : ಗಣಾಚಾರಿ

ಆಗಬೇಕು ಅಂದ್ರೆ ಹೀಗಿನಿಂದಲೇ ನೀವು ಗುರುಗಳು ತೋರಿಸಿದ ಮಾರ್ಗದರ್ಶನದಲ್ಲಿ ನೆಡೆದು ಒಳ್ಳೆಯ ಫಲಿತಾಂಶವನ್ನು ಪಡೆದು ವಿದ್ದೆ ಕಲಿಸಿದ ಗುರುವಿಗೂ, ಜನ್ಮಕೊಟ್ಟ ತಂದೆ ತಾಯಿಗೂ ಒಳ್ಳೆಯ ಮಕ್ಕಳಾಗಿ ಎಂದರು.

ಉಪ್ಪಿಗಿಂತ ರುಚಿ ಇಲ್ಲ, ತಾಯಿಗಿಂತ ಬಂಧುವಿಲ್ಲ ಎನ್ನುವಂತೆ ನಮ್ಮ ಜೀವನದಲ್ಲಿ ಎಂದಿಗೂ ತಂದೆ–ತಾಯಿಗಳ ಋಣ ತೀರಿಸಲಾಗದು. ಎಲ್ಲರು ತಂದೆ–ತಾಯಿಗಳನ್ನು ಗೌರವಿಸುವ ಮತ್ತು ಪ್ರೀತಿಸಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮವನ್ನು ಶಾಂತಲಾ ನಿರೂಪಿಸಿದರು. ಯಮನೂರಪ್ಪ ಕಡೆಮನಿ ವಂದನಾರ್ಪಣೆ ಮಾಡಿದರು.ಈ ಸಂದರ್ಭದಲ್ಲಿ ಪ್ರಥಮ ದರ್ಜೆ ಗುತ್ತಿಗೆದಾರ ಶರಣಬಸವ ಮೇಟಿ, ಸಹ ಆಡಳಿತ ಅಧಿಕಾರಿ ಅಮರೇಶ ತೋರಣದಿನ್ನಿ, ಪ್ರಾಚಾರ್ಯರಾದ ವಿರೇಶ, ಸಂಯೋಜಕರಾದ ಮಸ್ತಾನ್, ಸ್ವರ್ಣಲತಾ, ಉಪನ್ಯಾಸಕರಾದ, ಚನ್ನಬಸವಸ್ವಾಮಿ, ಜಿ ಮಂಜುನಾಥ್, ಪೂಜಾ, ಸೇರಿ ದ್ವಿತೀಯ ಹಾಗೂ ಪ್ರಥಮ ವರ್ಷದ ವಿದ್ಯಾರ್ಥಿ, ವಿದ್ಯಾರ್ಥಿನಿಯರು ಭಾಗವಹಿಸಿದ್ದರು.

# ರಾಜ್ಯಸರ್ಕಾರದ ವಿರುದ್ಧ ಒಗ್ಗಟ್ಟಿನಿಂದ ಹೋರಾಡಿ

**ಬೆಂಗಳೂರು, ಜೂ. 20–**ರಾಜ್ಯನಾಯಕರ ಜತೆ ಅಮಿತ್ ಶಾ ಚರ್ಚೆ, ಒಗ್ಗಟ್ಟಿನಿಂದಿರಲು ತಾಕೀತು ಖಾಸಗಿ ಕಾರ್ಯಕ್ರಮದಲ್ಲಿ ಭಾಗಿಯಾಗಲು ರಾಜ್ಯಕ್ಕೆ ಆಗಮಿಸಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ ಬಿಜೆಪಿಯಲ್ಲಿನ ನಾಯಕರುಗಳ ಅಸಮಾಧಾನ, ಮುನಿಸಿಗೂ ಮದ್ದು ಅರೆಯಲು ಮುಂದಾಗಿದ್ದು, ಇಂದು ಬೆಳಿಗ್ಗೆ ರಾಜ್ಯ ನಾಯಕರುಗಳ ಜತೆ ಸಭೆ ನಡೆಸಿದರು.

ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ ತಂಗಿರುವ ಅಮಿತ್ ಶಾ ರವರು ಇಂದು ಬೆಳಿಗ್ಗೆಯೇ ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ಪ್ರತಿಪಕ್ಷ ನಾಯಕ ಆರ್. ಅಶೋಕ್, ಶಾಸಕಾಂಗ ಪಕ್ಷದ ಉಪನಾಯಕ ಅರವಿಂದ್ ಬೆಲ್ಲದ,ಸಂಸದ ತೇಜಸ್ವಿಸೂರ್ಯ ಸೇರಿದಂತೆ ಹಲವರ ಜತೆ ರಾಜ್ಯ ಬಿಜೆಪಿಯಲ್ಲಿನ ಬೆಳವಣಿಗೆಗಳು ಹಾಗೂ ಕಾಂಗ್ರೆಸ್ ಸರ್ಕಾರದ ವಿದ್ಯಮಾನಗಳ ಬಗ್ಗೆ ಚರ್ಚೆ ನಡೆಸಿ ಮತ್ತು ರಾಜ್ಯ ಸರ್ಕಾರದ ಜನವಿರೋಧಿ ನೀತಿಗಳ ವಿರುದ್ಧ ಹೋರಾಟವನ್ನು ಬಿರುಸುಗೊಳಿಸುವಂತೆ ಸೂಚಿಸಿದರು ಎಂದು ಹೇಳಲಾಗಿದೆ.

ಪಕ್ಷದ ಅಧ್ಯಕ್ಷರ ವಿಚಾರದಲ್ಲಿ ಶೀಘ್ರವೇ ತೀರ್ಮಾನ ಕೈಗೊಳ್ಳುತ್ತೇವೆ ವಿಜಯೇಂದ್ರ ಅವರನ್ನು ಮುಂದುವರೆಸುವ ಬಗ್ಗೆ ಅಭಿಪ್ರಾಯಗಳನ್ನು ಸಂಗ್ರಹಿಸಿದ್ದೇವೆ.ಸದ್ಯದಲ್ಲೇ ಹೈಕಮಾಂಡ್ ಒಂದು ತೀರ್ಮಾನ ಮಾಡಲಿದೆ ಎಂದು ಅಮಿತ್ ಶಾ ಹೇಳಿದರು ಎನ್ನಲಾಗಿದೆ. ಪಕ್ಷದಲ್ಲಿ ಅಸಮಾಧಾನ ಅತೃಪ್ತಿಗಳಿಗೆ ಅವಕಾಶ ಕೊಡದೆ ಎಲ್ಲರೂ ಒಗ್ಗಟ್ಟಿನಿಂದ ಕಾಂಗ್ರೆಸ್ ಸರ್ಕಾರದವಿರುದ್ಧ ಹೋರಾಟ ನಡೆಸುವಂತೆ ಸೂಚಿಸಿದರು ಎಂದು ಹೇಳಲಾಗಿದೆ.

**ಬಿಜೆಪಿಯಲ್ಲಿ ಗರಿಗೆದರಿದ ಚಟುವಟಿಕೆ–**ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ರಾಜ್ಯಕ್ಕೆ ಭೇಟಿ ನೀಡಿರುವ ಹೊತ್ತಿನಲ್ಲೇ ರಾಜ್ಯ ಬಿಜೆಪಿಯಲ್ಲಿ ರಾಜಕೀಯ ಚಟುವಟಿಕೆಗಳು ಗರಿಗೆದರಿದ್ದು, ಬಿಜೆಪಿ ರಾಜ್ಯಾಧ್ಯಕ್ಷರಾಗಿ ಬಿ.ವೈ. ವಿಜಯೇಂದ್ರ ಅವರನ್ನೆ ಮುಂದುವರೆಸಲು ಪಕ್ಷದ ಹೈಕಮಾಂಡ್ ಒಲವು ತೋರಿರುವ ಬೆನ್ನಲ್ಲೇ ಬಿಜೆಪಿಯಲ್ಲಿ ರಾಜಕೀಯ ಚಟುವಟಿಕೆಗಳು ಬಿರುಸು ಪಡೆದಿವೆ.

ಬಿಜೆಪಿ ರಾಜ್ಯಾಧ್ಯಕ್ಷರಾಗಿ ಬಿ.ವೈ. ವಿಜಯೇಂದ್ರ ಅವರನ್ನು ಮುಂದುವರೆಸುವ ಬಗ್ಗೆ ಪಕ್ಷದ ಹೈಕಮಾಂಡ್ ಒಲವು ತೋರಿರುವ ಸುಳಿವು ಸಿಗುತ್ತಿದ್ದಂತೆಯೇ ವಿಜಯೇಂದ್ರ ಅವರ ವಿರೋಧಿ ಬಣ ಸಭೆ ನಡೆಸಿ ಪಕ್ಷದ ವರಿಷ್ಠರಿಗೆ ವಿಜಯೇಂದ್ರ ವಿರುದ್ದ ದೂರು ಸಲ್ಲಿಸಲು ಮುಂದಾಗಿದ್ದು, ಭಿನ್ನರ ಮನವೊಲಿಸುವ ನಿಟ್ಟಿನಲ್ಲಿ ಹಿರಿಯ ನಾಯಕರುಗಳು ಪ್ರಯತ್ನ ನಡೆಸಿದ್ದು, ಕೇಂದ್ರ ಸಚಿವ ವಿ. ಸೋಮಣ್ಣ, ಪ್ರಹ್ಲಾದ್ ಜೋಷಿ ಇವರುಗಳು ಬಿಜೆಪಿ ಭಿನ್ನರ ಬಣದಲ್ಲಿ ಗುರುತಿಸಿಕೊಂಡಿರುವ ಮಾಜಿ ಸಂಸದ ಸಿದ್ದೇಶ್ವರ್, ಶಾಸಕ ಬಿ.ಪಿ. ಹರೀಶ್, ಮಾಜಿ ಸಚಿವರಾದ ಅರವಿಂದ ಲಿಂಬಾವಳಿ, ರಮೇಶ್ ಜಾರಕಿಹೊಳಿ ಇವರನ್ನು ಭೇಟಿ ಮಾಡಿ ಭಿನ್ನಮತ ಶಮನಕ್ಕೆ ಪ್ರಯತ್ನ ನಡೆಸಿದ್ದಾರೆ.

ನಿನ್ನೆ ತಡರಾತ್ರಿ ಜಿ.ಎಂ. ಸಿದ್ದೇಶ್ವರ್ ನಿವಾಸದಲ್ಲಿ ನಡೆದ ಭಿನ್ನರ




ಸಭೆಯಲ್ಲಿ ಸಚಿವ ಸೋಮಣ್ಣ ಸಹ ಭಾಗಿಯಾಗಿ ಭಿನ್ನರ ಮನವೊಲಿಸುವ ಕಾರ್ಯ ನಡೆಸಿದರು.ಪಕ್ಷದ ಸಂಘಟನೆಯನ್ನು ಗಮನದಲ್ಲಿಟ್ಟುಕೊಂಡು ಹೈಕಮಾಂಡ್ ತೀರ್ಮಾನಕ್ಕೆ ಎಲ್ಲರೂ ಬದ್ಧರಾಗೋಣ ಎಂಬ ಮಾತುಗಳನ್ನು ಸಚಿವ ಸೋಮಣ್ಣ ಈ ಸಭೆಯಲ್ಲಿ ಹೇಳಿದ್ದಾರೆ ಎನ್ನಲಾಗಿದೆ.ಯಾವುದೇ ಸಂಧಾನ, ರಾಜಿಗೂ ಬಗ್ಗದ ಭಿನ್ನರು ವಿಜಯೇಂದ್ರ ವಿರುದ್ಧ ಸಮರ ಸಾರಿದ್ದು, ಬೆಂಗಳೂರಿನಲ್ಲಿರುವ ಅಮಿತ್ ಶಾ ರವರ ಭೇಟಿಗೆ ಸಮಯ ಕೇಳಿದ್ದಾರೆ.

ಆದಿಚುಂಚನಗಿರಿ ಮಠದ ವೈದ್ಯಕೀಯ ಕಾಲೇಜು ಉದ್ಘಾಟನೆಗೆ ಆಗಮಿಸಿರುವ ಅಮಿತ್ ಶಾರವರು ತಮಗೆ ಇಂದು ಸಮಯ ಕೊಡದಿದ್ದರೆ ದೆಹಲಿಗೆ ತೆರಳಿ ಅಲ್ಲಿಯೇ ಅಮಿತ್ ಶಾ ಹಾಗೂ ಪಕ್ಷದ ಇತರ ವರಿಷ್ಠರನ್ನು ಭೇಟಿ ಮಾಡಲು ಭಿನ್ನರು ಮುಂದಾಗಿದ್ದಾರೆ.ಇದೆಲ್ಲದರ ನಡುವೆಯೇ ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ ಭಿನ್ನಮತ ಶಮನಕ್ಕೆ ಮುಂದಾಗಿದ್ದು, ಅವರು ಸಹ ನಿನ್ನೆ ಮಾಜಿ ಸಂಸದ ಜಿ.ಎಂ. ಸಿದ್ದೇಶ್ವರ್ ಹಾಗೂ ಶಾಸಕ ಹರೀಶ್ ಜತೆ ಮಾತುಕತೆ ನಡೆಸಿದರು. ಇಷ್ಟೆಲ್ಲಾ ಆದರೂ ಭಿನ್ನರು ಮಾತ್ರ ತಮ್ಮ ಪಟ್ಟು ಸಡಿಲಿಸುತ್ತಿಲ್ಲ. ಹಾಗಾಗಿ ಭಿನ್ನರ ನಡೆ ಕುತೂಹಲ ಮೂಡಿಸಿದೆ.ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರನ್ನು ಪಕ್ಷದಿಂದ ಉಚ್ಚಾಟಿಸಿದ ನಂತರ ಬಿಜೆಪಿಯ ಭಿನ್ನ ನಾಯಕರು ಸ್ವಲ್ಪಮಟ್ಟಿಗೆ ತಣ್ಣಗಾಗಿದ್ದರು. ಬಿಜೆಪಿ ರಾಜ್ಯಾಧ್ಯಕ್ಷರಾಗಿ ವಿಜಯೇಂದ್ರರವರನ್ನು ಮುಂದುವರೆಸಲಾಗುತ್ತದೆ ಎಂಬ ಸುಳಿವು ಸಿಗುತ್ತಿದ್ದಂತೆಯೇ ಮತ್ತೆ ಭಿನ್ನರು ಚುರುಕಾಗಿದ್ದು, ವರಿಷ್ಠರನ್ನು ಭೇಟಿ ಮಾಡಿ ತಮ್ಮ ಅಹವಾಲು ಸಲ್ಲಿಸಲಿದ್ದಾರೆ.

**ಬಿ.ವೈ. ವಿಜಯೇಂದ್ರ ಪರ ಲಾಬಿ–**ಬಿಜೆಪಿ ರಾಜ್ಯಾಧ್ಯಕ್ಷರಾಗಿ ಬಿ.ವೈ. ವಿಜಯೇಂದ್ರರವರನ್ನೆ ಮುಂದುವರೆಸಬೇಕು. ಅವರ ನೇತೃತ್ವದಲ್ಲಿ ಪಕ್ಷ ಸಂಘಟನೆ ಚುರುಕಾಗಿದೆ ಎಂದು ವಿಜಯೇಂದ್ರ ಪರ ನಾಯಕರುಗಳು ಕೇಂದ್ರ ಗೃಹ ಸಚಿವ ಅಮಿತ್ ಶಾ ರವರಿಗೆ ಅಹವಾಲು ಸಲ್ಲಿಸಲಿದ್ದಾರೆ ಎಂದು ಹೇಳಲಾಗಿದೆ.

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಇಂದು ಯಾವ ಬಿಜೆಪಿ ನಾಯಕರಿಗೂ ಸಮಯ ಕೊಟ್ಟಿಲ್ಲ. ಸಮಯ ಕೊಟ್ಟರೆ ವಿಜಯೇಂದ್ರ ಪರ ನಾಯಕರುಗಳು ಅಮಿತ್ ಶಾ ರವರನ್ನು ಭೇಟಿ ಮಾಡಿ ವಿಜಯೇಂದ್ರ ಮುಂದುವರಿಕೆ ತೀರ್ಮಾನವನ್ನು ಆದಷ್ಟು ಶೀಘ್ರ ಪ್ರಕಟಿಸುವಂತೆ ಮನವಿ ಮಾಡುವರು ಎಂದು ಹೇಳಲಾಗಿದೆ.

# ನಂದೂರು ಸೆಕೆಂಡರಿ ಡಿಸ್ಟಲರಿ ಸೆಂಟರ್ ವೀಕ್ಷಿಸಿದ ಡಿ.ಸಿ

**ಕಲಬುರಗಿ:ಜೂ.19–** ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರು ಗುರುವಾರ ಕಲಬುರಗಿ ತಾಲೂಕಿನ ನಂದೂರ ಕೈಗಾರಿಕೆ ಪ್ರದೇಶದಲ್ಲಿನ ಅಬಕಾರಿ ಇಲಾಖೆಯ ಸೆಕೆಂಡರಿ ಡಿಸ್ಟಲರಿ ಸೆಂಟರ್ ಮತ್ತು ಕೆ.ಎಸ್.ಬಿ.ಸಿ.ಎಲ್ ಡಿಪೋಗೆ ಭೇಟಿ ನೀಡಿ ಅದರ ಕಾರ್ಯವೈಖರಿ ಪರಿಶೀಲಿಸಿದರು.

ಅಬಕಾರಿ ಉಪ ಆಯುಕ್ತ ಡಾ.ಸಂಗಣ್ಣಗೌಡ ಹೊಸಳ್ಳಿ ಅವರಿಂದ ಘಟಕದ ಕಾರ್ಯನಿರ್ವಹಣೆ ಮತ್ತು ರಾಜಸ್ವ ಸಂಗ್ರಹಣೆ ಅಂಶಗಳ ಕುರಿತು ಮಾಹಿತಿ ಪಡೆದುಕೊಂಡರು. ಇದಕ್ಕೂ ಮುನ್ನ ಭೂ ಪರಿವರ್ತನೆ ಕೋರಿ ಬಂದಿರುವ ಜಾಫರಾಬಾದ ಸರ್ವೆ ನಂ.58/4, ಇಟಗಾ ಸರ್ವೆ ನಂ.99/5, ಕೋಟನೂರ 'ಡಿ' ಸರ್ವೆ ನಂ.38/3, ಸಣ್ಣೂರ ಸರ್ವೆ ನಂ.132/3 ವೀಕ್ಷಿಸಿದರು.

ಕಲಬುರಗಿ ತಹಶೀಲ್ದಾರ ಆನಂದಶೀಲ ಕೆ. ಸೇರಿದಂತೆ ಅಬಕಾರಿ



ಇಲಾಖೆಯ ಅಧೀಕ್ಷಕರು, ಉಪಾಧೀಕ್ಷಕರು, ನಿರೀಕ್ಷಕರು ಹಾಗೂ ಇತರೆ ಸಿಬ್ಬಂದಿ ವರ್ಗದವರು ಇದ್ದರು.

# ಜಮೀರ್ ರಾಜೀನಾಮೆಗೆ ಶರವಣ ಆಗ್ರಹ

**ಬೆಂಗಳೂರು, ಜೂ.20–**ರಾಜ್ಯದ ಕಾಂಗ್ರೆಸ್ ಸರ್ಕಾರದಲ್ಲಿ ಬ್ರಹ್ಮಾಂಡ ಭ್ರಷ್ಟಾಚಾರ ತಾಂಡವ ನೃತ್ಯ ಆಡುತ್ತಿದೆ ಎನ್ನುವುದಕ್ಕೆ ಹಿರಿಯ ಶಾಸಕ ಬಿ.ಆರ್.ಪಾಟೀಲ್ ತಮ್ಮದೇ ಸರ್ಕಾರದ ವಿರುದ್ಧ ಮಾಡಿರುವ ಸ್ಫೋಟಕ ಆರೋಪವೇ ಸಾಕ್ಷಿಯಾಗಿದೆ ಎಂದು ವಿಧಾನಪರಿಷತ್ ಹಿರಿಯ ಸದಸ್ಯ ಟಿ.ಎ.ಶರವಣ ಟೀಕಿಸಿದ್ದಾರೆ.

ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿರುವ ಅವರು, ವಸತಿ ಇಲಾಖೆಯಲ್ಲಿ ಹೆಜ್ಜೆ ಹೆಜ್ಜೆಗೂ ಕಾಂಚಾಣವೇ ಮಾತಾಡಬೇಕು. ಹಣ ಇಲ್ಲದಿದ್ದರೆ ಅಲ್ಲಿ ಏನೇನೂ ಆಗುವುದಿಲ್ಲ ಎಂದು ಆಡಳಿತ ಪಕ್ಷದ ಶಾಸಕರೇ ಮಾಡಿರುವ ಆರೋಪದ ಹಿನ್ನೆಲೆಯಲ್ಲಿ ಸಚಿವ ಜಮೀರ್ ಅಹಮದ್ ರಾಜೀನಾಮೆ ನೀಡಬೇಕು. ಇಲ್ಲದಿದ್ದರೆ ಮುಖ್ಯಮಂತ್ರಿ ಸಿದ್ದರಾಮಯ್ಯರವರು ಅವರನ್ನು ಸಂಪುಟದಿಂದ ವಜಾ ಮಾಡಬೇಕು ಎಂದು ಒತ್ತಾಯಿಸಿದ್ದಾರೆ.

ಸಚಿವ ಜಮೀರ್ ಅವರ ಆಪ್ತ ಕಾರ್ಯದರ್ಶಿ ಸರ್ಫರೋಜ್ ಖಾನ್ ಅವರೇ ಇಲಾಖೆಯಲ್ಲಿನ ಮನೆ



ಹಂಚಿಕೆಗೆ ಲಂಚ ಕೊಡುವ ಪರಿಸ್ಥಿತಿ ಇದೆ ಎಂದು ಆಡಳಿತ ಪಕ್ಷದ ಶಾಸಕರಿಗೇ ಹೇಳಿರುವುದನ್ನು ನೋಡಿದರೆ ಆಡಳಿತ ವ್ಯವಸ್ಥೆ ಕುಲಗೆಟ್ಟು ಹೋಗಿರುವುದು ಅರ್ಥವಾಗುತ್ತದೆ. ಈ ಸರ್ಕಾರ ಅಧಿಕಾರದಲ್ಲಿ ಉಳಿಯುವ ನೈತಿಕತೆಯನ್ನು ಕಳೆದುಕೊಂಡಿದೆ ಎಂದು ಶರವಣ ಕಿಡಿಕಾರಿದ್ದಾರೆ.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9743497111, 9743496111

# ದಾಖಲೆಯ ಯೋಗ ದಿನಾಚರಣೆಗೆ ಸಾಕ್ಷಿಯಾಗಲಿದ್ದಾರೆ ಪ್ರಧಾನಿ ಮೋದಿ

**ಅಮರಾವತಿ,ಜೂ.20–** ಆಂಧ್ರಪ್ರದೇಶ ಇಂದು ಆಯೋಜಿಸಿರುವ ಬೃಹತ್ ಅಂತರರಾಷ್ಟ್ರೀಯ ಯೋಗ ದಿನಾಚರಣೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗವಹಿಸಲಿದ್ದಾರೆ. ಬಂದರು ನಗರಿ ವಿಶಾಖಪಟ್ಟಣಂನ ಆರ್‌ಕೆ ಬೀಚ್‌ನಿಂದ ಭೋಗಪುರಂವರೆಗೆ 26ಕಿ.ಮೀ ಉದ್ದದ ಕಾರಿಡಾರ್‌ನಲ್ಲಿ ಈ ಕಾರ್ಯಕ್ರಮ ನಡೆಯಲಿದ್ದು, 3 ಲಕ್ಷಕ್ಕೂ ಹೆಚ್ಚು ಜನರು ಏಕಕಾಲದಲ್ಲಿ ಯೋಗ ಮಾಡಬಹುದು.

ಬೆಳಿಗ್ಗೆ 6:30 ರಿಂದ 8:00 ಗಂಟೆಯವರೆಗೆ ನಡೆಯಲಿರುವ ಈ ಕಾರ್ಯಕ್ರಮವನ್ನು ಗಿನ್ನೆಸ್ ವಿಶ್ವ ದಾಖಲೆ ಸೇರಿದಂತೆ ಹಲವಾರು ದಾಖಲೆಗಳನ್ನು ಸ್ಥಾಪಿಸುವ ಮತ್ತು ಮನ್ನಣೆ ಪಡೆಯುವ ರೀತಿಯಲ್ಲಿ ಆಯೋಜಿಸಲಾಗುವುದು ಎಂದು ಮುಖ್ಯಮಂತ್ರಿ ಎನ್ ಚಂದ್ರಬಾಬು ನಾಯ್ಡು ಹೇಳಿದ್ದಾರೆ. ಜೂನ್ 21 ರಂದು ವಿಶಾಖಪಟ್ಟಣಂನಲ್ಲಿ ಮಾತ್ರವಲ್ಲದೆ ರಾಜ್ಯಾದ್ಯಂತ ಏಕಕಾಲದಲ್ಲಿ ಚಟುವಟಿಕೆಗಳನ್ನು ಆಯೋಜಿಸುವ ಮೂಲಕ ಹಲವಾರು ಲಕ್ಷ ಜನರನ್ನು ಸಜ್ಜುಗೊಳಿಸುವ ಮೂಲಕ ಆಂಧ್ರಪ್ರದೇಶ ಸರ್ಕಾರವು ಯೋಗದಲ್ಲಿ ದಾಖಲೆಗಳ ಸರಮಾಲೆಯನ್ನು ಸ್ಥಾಪಿಸುವ ಗುರಿಯನ್ನು ಹೊಂದಿದೆ. ಪ್ರಪಂಚದಾದ್ಯಂತ ಹಲವಾರು ದೇಶಗಳು ಆಚರಿಸುವ 11 ನೇ ಅಂತರರಾಷ್ಟ್ರೀಯ ಯೋಗ ದಿನವನ್ನು ಒಂದು ಭೂಮಿಗಾಗಿ, ಒಂದು ಆರೋಗ್ಯಕ್ಕಾಗಿ ಎಂಬ ಥೀಮ್ನೊಂದಿಗೆ ಆಚರಿಸಲಾಗುತ್ತಿದೆ.ಸುಮಾರು 25,000 ಬುಡಕಟ್ಟು ವಿದ್ಯಾರ್ಥಿಗಳು 108 ನಿಮಿಷಗಳ ಕಾಲ ಸೂರ್ಯ ನಮಸ್ಕಾರಗಳನ್ನು ಪ್ರದರ್ಶಿಸಲಿದ್ದಾರೆ.

ಏಕಕಾಲದಲ್ಲಿ ಸೂರ್ಯ ನಮಸ್ಕಾರಗಳನ್ನು ಪ್ರದರ್ಶಿಸುವ ಅತಿದೊಡ್ಡ ಗುಂಪು ಮತ್ತು ಅತಿ ಹೆಚ್ಚು ಜನರ ದಾಖಲೆಗಳನ್ನು ನಿರ್ಮಿಸುವುದು ಇದರ ಉದ್ದೇಶವಾಗಿದೆ ಎಂದು ನಾಯ್ಡು ಹೇಳಿದರು. ರಾಜ್ಯಾದ್ಯಂತ ಒಂದು ಲಕ್ಷ ಕೇಂದ್ರಗಳಲ್ಲಿ ಯೋಗ ಅವಧಿಗಳನ್ನು ಆಯೋಜಿಸುವುದು ಮತ್ತು ವಿಶಾಖಪಟ್ಟಣದಲ್ಲಿ ಯೋಗ ಚಟುವಟಿಕೆಗಳಲ್ಲಿ ಭಾಗವಹಿಸಲು ಐದು ಲಕ್ಷ ಜನರನ್ನು ಆಕರ್ಷಿಸುವುದು ಸರ್ಕಾರದ ಗುರಿಯಾಗಿದೆ.ವಿಶಾಖಪಟ್ಟಣಂನ ಆರ್‌ಕೆ ಬೀಚ್‌ನಿಂದ ಭೋಗಪುರಂವರೆಗಿನ 26 ಕಿಮೀ ವ್ಯಾಪ್ತಿಯಲ್ಲಿ ವಿಸ್ತಾರವಾದ ವ್ಯವಸ್ಥೆಗಳನ್ನು ಮಾಡಲಾಗಿದೆ.ಎಂದು ಗಮನಿಸಿದ ಸಿಎಂ, ಆರ್‌ಕೆ ಬೀಚ್‌ನಿಂದ ಏಕಕಾಲದಲ್ಲಿ 3.19 ಲಕ್ಷ ಜನರು ಯೋಗ ಮಾಡಬಹುದು ಎಂದು ಹೇಳಿದರು.

ರಾಜ್ಯ, ದೇಶ ಮತ್ತು ಪ್ರಪಂಚದಾದ್ಯಂತ ಎಂಟು ಲಕ್ಷ ಸ್ಥಳಗಳಿಂದ ಭಾಗವಹಿಸುವವರು ಸೇರುವ ನಿರೀಕ್ಷೆಯಿದೆ ಎಂದು ಅವರು ಹೇಳಿದರು. ಯೋಗ ದಿನದ ಚಟುವಟಿಕೆಗಳಲ್ಲಿ ಭಾಗವಹಿಸಲು ಅಂದಾಜು ಎರಡು ಕೋಟಿ ನೋಂದಣಿಗಳು 2.39



ಕೋಟಿಗೆ ಏರಿದೆ ಎಂದು ಅವರು ಹೇಳಿದರು.ಯೋಗ ದಿನದ ಪೂರ್ವಭಾವಿಯಾಗಿ, ದಕ್ಷಿಣ ರಾಜ್ಯವು ಆಯೋಗಾಂಧ್ರವನ್ನು ಪ್ರಾರಂಭಿಸಿತು. ಇದು ಭಾರತದಿಂದ ಹುಟ್ಟಿದ ಪ್ರಾಚೀನ ಅಭ್ಯಾಸಕ್ಕೆ ಸಂಬಂಧಿಸಿದ ಹಲವಾರು ಚಟುವಟಿಕೆಗಳೊಂದಿಗೆ ಯೋಗದ ಬಗ್ಗೆ ಜಾಗೃತಿ ಮೂಡಿಸಲು ಒಂದು ತಿಂಗಳ ಕಾಲ ನಡೆಯುವ ಅಭಿಯಾನವಾಗಿದೆ. ಯೋಗಾಂಧ್ರದ ಭಾಗವಾಗಿ, ಗ್ರಾಮ ಮಟ್ಟದಿಂದ ರಾಜ್ಯ ಮಟ್ಟದವರೆಗೆ 15,000 ಯೋಗ ಸ್ಪರ್ಧೆಗಳನ್ನು ನಡೆಸಲಾಗಿದ್ದು, 5.451 ಮಾಸ್ಟರ್ ತರಬೇತುದಾರರು ಈ ಪ್ರಯತ್ನಕ್ಕೆ ಕೊಡುಗೆ ನೀಡಿದ್ದಾರೆ ಮತ್ತು ವಿವಿಧ ಯೋಗ ಕಾರ್ಯಕ್ರಮಗಳಲ್ಲಿ ಭಾಗವಹಿಸಿದ ಒಂದು ಕೋಟಿಗೂ ಹೆಚ್ಚು ಜನರಿಗೆ ಪ್ರಮಾಣೀಕರಣ ನೀಡಲಾಗಿದೆ ಎಂದು ಸರ್ಕಾರದ ಪ್ರಕಟಣೆ ತಿಳಿಸಿದೆ.

ಈ ಮೆಗಾ ಕಾರ್ಯಕ್ರಮದ ಸುಗಮ ನಿರ್ವಹಣೆಗಾಗಿ, ತಲಾ 1,000 ಜನರ ಸಾಮರ್ಥ್ಯವಿರುವ 326 ವಿಭಾಗಗಳನ್ನು ಸಿದ್ಧಪಡಿಸಲಾಗಿದೆ, ಜೊತೆಗೆ 3.32 ಲಕ್ಷ ಟೀ ಶರ್ಟ್‌ಗಳು ಮತ್ತು ಐದು ಲಕ್ಷ ಯೋಗ ಮ್ಯಾಟ್‌ಗಳನ್ನು ಸಿದ್ಧಪಡಿಸಲಾಗಿದೆ.ಜೂನ್ 21 ರಂದು ಯೋಗ ಚಟುವಟಿಕೆಗಳಿಗಾಗಿ ರಾಜ್ಯಾದ್ಯಂತ 1.3 ಲಕ್ಷಕ್ಕೂ ಹೆಚ್ಚು ಸ್ಥಳಗಳನ್ನು ಅಧಿಕಾರಿಗಳು ಗುರುತಿಸಿ ನೋಂದಾಯಿಸಿದ್ದಾರೆ. ಆದರೆ ವಿಶಾಖಪಟ್ಟಣದಲ್ಲಿ 30,000 ಜನರಿಗೆ ಪರ್ಯಾಯ ವ್ಯವಸ್ಥೆಗಳನ್ನು ಸಹ ಮಾಡಲಾಗಿದೆ.

## ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿ ಪದ್ಮಿನಿ ನಾಗರಾಜ್ ರಾಜೀನಾಮೆ



**ಬೆಂಗಳೂರು, ಜೂ.20–**ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿ ಪದ್ಮಿನಿ ನಾಗರಾಜ್ ಅವರು ರಾಜೀನಾಮೆ ನೀಡಿರುವ ಕುರಿತು ವ್ಯಾಪಕ ಚರ್ಚೆಗಳು ನಡೆಯುತ್ತಿವೆ.ತಾಯಿಯ ಅನಾರೋಗ್ಯ ಹಿನ್ನೆಲೆಯಲ್ಲಿ ಅವರನ್ನು ನೋಡಿಕೊಳ್ಳಬೇಕಾಗಿದೆ ಹಾಗಾಗಿ ಕಾಸಾಪದ ಮಹತ್ವದ ಜವಾಬ್ದಾರಿ ಹೊರಲು ಸಾಧ್ಯವಾಗುತ್ತಿಲ್ಲ ಎಂಬ ಮಾತುಗಳು ಕೇಳಿ ಬರುತ್ತಿದೆ. ಆದರೆ, ಅಧ್ಯಕ್ಷ ಮಹೇಶ್ ಜೋಷಿಯವರ ನಡೆಯನ್ನುವಿರೋಧಿಸಿ ಅವರು ರಾಜೀನಾಮೆ ನೀಡಿದ್ದಾರೆಂಬ ಮಾತುಗಳೂ ಕೂಡ ಕೇಳಿ ಬರುತ್ತಿವೆ.

ಕಳೆದ ಹಲವು ದಿನಗಳಿಂದ ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ನಡೆಯುತ್ತಿರುವ ಹಲವು ವಿದ್ಯಾಮಾನಗಳು ಸಾಕಷ್ಟುಅಸಮಾಧಾನಗಳಿಗೆ ಕಾರಣವಾಗುತ್ತಿವೆ.ಬಹಿರಂಗವಾಗಿ ಕೆಲ ಜಿಲ್ಲಾ ಸಂಘಟನೆಗಳು ಹಾಗೂ ಸಾಹಿತಿಗಳು ಮತ್ತು ಕಸಾಪದ ಹಿತ ಚಿಂತಕರು, ಅಧ್ಯಕ್ಷರು ಸರ್ವಾಧಿಕಾರಿ ದೋರಣೆ ತಳೆದಿದ್ದಾರೆ ಕೂಡಲೇ ರಾಜೀನಾಮೆ ನೀಡಬೇಕೆಂದು ಹೇಳುತ್ತಿದ್ದಾರೆ.

ಇದರ ನಡುವೆ ಕಸಾಪದ ಗೌರವ ಕಾರ್ಯದರ್ಶಿ ಸ್ಥಾನಕ್ಕೆ ಪದ್ಮನಿ ನಾಗರಾಜ್ ಅವರು ರಾಜೀನಾಮೆ ನೀಡುತ್ತಿರುವುದು ಹಲವು ಸಂಶಯಗಳಿಗೆ ಎಡೆಮಾಡಿಕೊಟ್ಟಿದೆ.ಇದರ ನಡುವೆ ಪದ್ಮನಿ ನಾಗರಾಜ್ ಅವರು ಯಾರ ಕರೆನೂ ಸ್ವೀಕರಿಸುತ್ತಿಲ್ಲ.

# ಕರ್ನಾಟಕ–ಮಹಾರಾಷ್ಟ್ರ ಗಡಿ ವಿವಾದ ಬಗೆಹರಿಸಲು ಉನ್ನತಾಧಿಕಾರ ಸಮಿತಿ ಪುನರಚಿಸಿದ ಮಹಾ ಸರ್ಕಾರ



**ಮುಂಬೈ, ಜೂ. 20–** ಕರ್ನಾಟಕದೊಂದಿಗಿನ ರಾಜ್ಯದ ಗಡಿ ವಿವಾದವನ್ನು ಪರಿಹರಿಸಲು ಮಹಾರಾಷ್ಟ್ರ ಸರ್ಕಾರವು ಉನ್ನತಾಧಿಕಾರ ಸಮಿತಿಯನ್ನು ಪುನರಚಿಸಿದೆ.ನಿನ್ನೆ ಹೊರಡಿಸಲಾದ ಸರ್ಕಾರಿ ನಿರ್ಣಯದ (ಜಿಆರ್) ಪ್ರಕಾರ, ಗಡಿ ವಿವಾದಕ್ಕೆ ಸಂಬಂಧಿಸಿದ ನಿರ್ಣಾಯಕ ನಿರ್ಧಾರಗಳನ್ನು ಪಕ್ಷಾತೀತ ಮತ್ತು ಪ್ರತಿನಿಧಿ ಸಂಸ್ಥೆಯಿಂದ ಒಮ್ಮತದಿಂದ ತೆಗೆದುಕೊಳ್ಳಬೇಕಾಗಿರುವುದರಿಂದ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ನೇತೃತ್ವದ ಸಮಿತಿಯನ್ನು ಪುನರಚಿಸಲಾಗಿದೆ.

ಕಾಲಕಾಲಕ್ಕೆ, ಹೊಸ ಸರ್ಕಾರಗಳು ಅಧಿಕಾರ ವಹಿಸಿಕೊಂಡಂತೆ ಸಮಿತಿಯನ್ನು ಪುನರಚಿಸಲಾಗುತ್ತಿದೆ. ಆಗಿನ ಮಹಾಯುತಿ ಮೈತ್ರಿಕೂಟವು ಏಕನಾಥ್ ಶಿಂಧೆ ಅವರನ್ನು ಮುಖ್ಯಮಂತ್ರಿಯಾಗಿ ನೇಮಿಸಿದ ತಿಂಗಳುಗಳ ನಂತರ, ನವೆಂಬರ್ 22, 2022 ರಂದು ಇದೇ ರೀತಿಯ ಕಸರತ್ತು ನಡೆಸಲಾಗಿತ್ತು. ಕಳೆದ ವರ್ಷದ ವಿಧಾನಸಭಾ ಚುನಾವಣೆಯ ನಂತರ ಫಡ್ನವೀಸ್ ಮುಖ್ಯಮಂತ್ರಿಯಾಗಿ ಹೊಸ ಸರ್ಕಾರ ರಚನೆಯಾದ ನಂತರ ಸಮಿತಿಯನ್ನು ಈಗ ಪುನರಚಿಸಲಾಗಿದೆ.ಫಡ್ನವೀಸ್ 18 ಸದಸ್ಯರ ಸಮಿತಿಗೆ ನೇತೃತ್ವ ವಹಿಸಿದ್ದಾರೆ.

ಇದರಲ್ಲಿ ಶಿಂಧೆ ಮತ್ತು ಅಜಿತ್ ಪವಾರ್ ಮತ್ತು ಮಾಜಿ ಸಿಎಂಗಳಾದ ನಾರಾಯಣ್ ರಾಣೆ, ಶರದ್ ಪವಾರ್ ಮತ್ತು ಪೃಥ್ವಿರಾಜ್ ಚವಾಣ್ ಕೂಡ ಸೇರಿದ್ದಾರೆ.ಎನ್‌ಸಿಪಿ (ಎಸ್‌ಪಿ) ಶಾಸಕರಾದ ರೋಹಿತ್ ಪಾಟೀಲ್ ಮತ್ತು ಜಯಂತ್ ಪಾಟೀಲ್, ಸಚಿವರಾದ ಚಂದ್ರಕಾಂತ್ ಪಾಟೀಲ್, ಶಂಭುರಾಜ್ ದೇಸಾಯಿ, ಪ್ರಕಾಶ್ ಅಬಿತ್ತರ್, ಸುರೇಶ್ ಖಾಡೆ, ಬಿಜೆಪಿ ಶಾಸಕರಾದ ಸುಧೀರ್ ಗಾಡ್ಗಿಲ್, ಸಚಿನ್ ಕಲ್ಯಾಣ್ ಶೆಟ್ಟಿ, ವಿಧಾನಸಭೆ ಮತ್ತು ಪರಿಷತ್ತಿನ ವಿರೋಧ ಪಕ್ಷದ ನಾಯಕರು ಸಮಿತಿಯ ಇತರ ಸದಸ್ಯರಲ್ಲಿ ಸೇರಿದ್ದಾರೆ.

ಮಹಾರಾಷ್ಟ್ರ ವಿಧಾನಸಭೆಯಲ್ಲಿ ಪ್ರಸ್ತುತ ವಿರೋಧ ಪಕ್ಷದ ನಾಯಕರಿಲ್ಲ. ಶಿವಸೇನೆ (ಯುಬಿಟಿ) ಮತ್ತು ಕಾಂಗ್ರೆಸ್ ಶಾಸಕರು ಉನ್ನತ ಅಧಿಕಾರದ ಸಮಿತಿಯಲ್ಲಿ ಸ್ಥಾನ ಪಡೆದಿಲ್ಲ.ಭಾಷಾ ಆಧಾರದ ಮೇಲೆ ರಾಜ್ಯಗಳ ಮರುಸಂಘಟನೆಯ ನಂತರ ಗಡಿ ಸಮಸ್ಯೆ 1957 ರ ಹಿಂದಿನದು. ಮಹಾರಾಷ್ಟ್ರವು ಗಣನೀಯ ಪ್ರಮಾಣದಲ್ಲಿ ಮರಾಠಿ ಮಾತನಾಡುವ ಜನಸಂಖ್ಯೆಯನ್ನು ಹೊಂದಿರುವುದರಿಂದ ಹಿಂದಿನ ಬಾಂಬೆ ಪ್ರೆಸಿಡೆನ್ಸಿಯ ಭಾಗವಾಗಿದ್ದ ಬೆಳಗಾವಿಯನ್ನು ಸೇರಿಸಿಕೊಳ್ಳಲು ಪ್ರಯತ್ನಿಸಿತು. ಪ್ರಸ್ತುತ ಕರ್ನಾಟಕದಲ್ಲಿರುವ 800 ಕ್ಕೂ ಹೆಚ್ಚು ಮರಾಠಿ ಮಾತನಾಡುವ ಹಳ್ಳಿಗಳ ಮೇಲೆ ಅದು ಹಕ್ಕು ಸಾಧಿಸಿತು.ರಾಜ್ಯಗಳ ಪುನರ್ವಿಂಗಡಣಾ ಕಾಯ್ದೆ ಮತ್ತು 1967 ರ ಮಹಾಜನ್ ಆಯೋಗದ ವರದಿಯ ಪ್ರಕಾರ ಭಾಷಾ ಆಧಾರದ ಮೇಲೆ ಮಾಡಿದ ಗಡಿ ಗುರುತಿಸುವಿಕೆಯನ್ನು ಕರ್ನಾಟಕವು ಅಂತಿಮಗೊಳಿಸಿಕೊಂಡಿದೆ.

## ಅಪಾಯಕಾರಿ ವೃಕ್ಷ, ಕೊಂಬೆ ತೆರವಿಗೆ ಸಚಿವ ಈಶ್ವರ ಖಂಡ್ರೆ ಸೂಚನೆ



**ಬೆಂಗಳೂರು, ಜೂ.20–** ಗಾಳಿ, ಮಳೆಗೆ ಮರ ಹಾಗೂ ಕೊಂಬೆಗಳು ಬಿದ್ದು ಪ್ರಾಣಹಾನಿ, ಆಸ್ತಿ ಹಾನಿ ಆಗುತ್ತಿದ್ದು, ಮಳೆಗಾಲಕ್ಕೆ ಮೊದಲೇ ಅಪಾಯಕಾರಿ ವೃಕ್ಷ ಗುರುತಿಸಿ ಕೊಂಬೆಗಳನ್ನು ಕತ್ತರಿಸಲು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ.ಖಂಡ್ರೆ ಅರಣ್ಯಾಧಿಕಾರಿಗಳಿಗೆ ಸೂಚಿಸಿದ್ದಾರೆ.

ಬೆಂಗಳೂರಿನ ಕಂಟೋನ್ಮೆಂಟ್ ಬಳಿ ಇಂದು ರಸ್ತೆ ಬದಿಯ ಮರದ ಸುತ್ತಲೂ ಹಾಕಲಾಗಿದ್ದ ಕಾಂಕ್ರೀಟ್ ತೆರವು ಮಾಡುವ ಮೂಲಕ ವೃಕ್ಷಗಳ ಸಂರಕ್ಷಣಾ ಕಾರ್ಯಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಮರದ ಕೊಂಬೆ ಬಿದ್ದು ಗಾಯಗೊಂಡಿದ್ದ 29 ವರ್ಷದ ಅಕ್ಷಯ್ ಮೃತಪಟ್ಟಿರುವ ಬಗ್ಗೆ ತೀವ್ರ ಶೋಕ ವ್ಯಕ್ತಪಡಿಸಿದರು.

ಮಳೆ, ಗಾಳಿಗೆ ಟೊಳ್ಳು ಮರಗಳು ಮತ್ತು ಬೇರು ಕಚ್ಚದ ಮರಗಳು ಧರಾಶಾಯಿ ಆಗುತ್ತವೆ. ಇದಕ್ಕೆ ಕಾರಣ ಬೇರಿಗೆ ನೀರು ಇಳಿಯದಂತೆ ಹಾಕಲಾಗಿರುವ ಕಾಂಕ್ರೀಟ್, ಕಲ್ಲಿನ ಚಪ್ಪಡಿ, ಟೈಲ್ಸ್ ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ. ಈ ಬಗ್ಗೆ ರಾಷ್ಟ್ರೀಯ ಹಸಿರು ನ್ಯಾಯಾಧಿಕರಣವೂ ತೀರ್ಪು ನೀಡಿದ್ದು, ಸರ್ಕಾರ ಈ ಸಂಬಂಧ ಅಧಿಕೃತ ಆದೇಶವನ್ನೇ ಹೊರಡಿಸಿದೆ ಎಂದರು.

ಮರದ ಸುತ್ತ ಇರುವ ಕಾಂಕ್ರೀಟ್ ತೆರವಿಗೆ ಬಿಬಿಎಂಪಿ ವಿಶೇಷ ಆಯುಕ್ತರು ನಿನ್ನೆ ಆದೇಶ ಮಾಡಿದ್ದು, ಇನ್ನು ಮುಂದೆ ರಸ್ತೆ ಬದಿ ಸಸಿ ನೆಡುವಾಗ ಒಂದು ಮೀಟರ್ ಸುತ್ತಳತೆಯಲ್ಲಿ ಮಣ್ಣು ಇರುವುದನ್ನು ಖಾತ್ರಿ ಪಡಿಸಿಕೊಳ್ಳಬೇಕು, ಬಿಬಿಎಂಪಿ ಮತ್ತು ರಾಜ್ಯದ ಎಲ್ಲ ನಗರಗಳ ಸ್ಥಳೀಯ ಸಂಸ್ಥೆಗಳು ಮತ್ತು ಹೆದ್ದಾರಿ ಪ್ರಾಧಿಕಾರ. ತೋಟಗಾರಿಕೆ ಇಲಾಖೆ ಹಾಗೂ ಅರಣ್ಯ ಇಲಾಖೆಯ ಸಾಮಾಜಿಕ ಅರಣ್ಯ ವಿಭಾಗ ತಾನು ಈಗಾಗಲೇ ನೆಟ್ಟಿರುವ ಗಿಡ ಮರಗಳ ಸುತ್ತ ಇರುವ ಕಾಂಕ್ರೀಟ್, ಡಾಂಬರು ತೆರವಿಗೆ ಕ್ರಮವಹಿಸಬೇಕು ಎಂದು ಹೇಳಿದರು.

ವೃಕ್ಷ ಪ್ರಾಧಿಕಾರ ಸಭೆಗಳನ್ನು ನಿಯಮಿತವಾಗಿ ನಡೆಸಿ, ಅಪಾಯಕಾರಿ ಮರಗಳನ್ನು ಗುರುತಿಸಿ, ಅವುಗಳ ರೆಂಬೆ, ಕೊಂಬೆ ತೆರವಿಗೆ ತ್ವರಿತವಾಗಿ ಕ್ರಮ ಕೈಗೊಳ್ಳಬೇಕು. ಒಬ್ಬ ಮನುಷ್ಯ ನೆಮ್ಮದಿಯಿಂದ ಉಸಿರಾಡಲು 7 ಮರ ಇರಬೇಕು ಎಂದು ತಜ್ಞರು ಹೇಳುತ್ತಾರೆ. ಆದರೆ ಇಂದು ಬೆಂಗಳೂರು ಕಾಂಕ್ರೀಟ್ ಕಾಡಾಗಿದ್ದು, ಇಲ್ಲಿ 7 ಜನರಿಗೆ 1 ಮರವೂ ಇಲ್ಲದ ಸ್ಥಿತಿ ನಿರ್ಮಾಣವಾಗಿದೆ. ಹೀಗಾಗಿ ಪ್ರತಿಯೊಬ್ಬರೂ ವೃಕ್ಷ ಸಂರಕ್ಷಣೆ ಮತ್ತು ಸಂವರ್ಧನೆಗೆ ಮುಂದಾಗಬೇಕು ಎಂದರು.

ಪ್ರತಿಯೊಬ್ಬರಿಗೂ ಆಮ್ಲ ಜನಕ ಬೇಕು, ಆದರೆ ತಮ್ಮ ಮನೆಯ ಮುಂದೆ ಗಿಡ ಇರಬಾರದು. ಇದರ ಎಲೆ ಉದುರಿದರೆ ಮನೆ ಮುಂದೆ ಕಸ ಆಗುತ್ತದೆ ಎನ್ನುತ್ತಾರೆ. ಇನ್ನು ಮನೆಯ ಸೌಂದರ್ಯಕ್ಕೆ ಅಥವಾ ಅಂಗಡಿಗಳ ಫಲಕ ಕಾಣುವುದಿಲ್ಲ ಎಂದು ಮರ ಕಡಿಯುವ ಪ್ರವೃತ್ತಿ ಹೆಚ್ಚುತ್ತಿದೆ ಎಂದು ವಿಷಾದಿಸಿದರು.

4000 ಕೋಟಿ ರೂ. ಮೌಲ್ಯದ ಅರಣ್ಯ ಒತ್ತುವರಿ ತೆರವು: ಬೆಂಗಳೂರು ನಗರ ಜಿಲ್ಲೆಯಲ್ಲಿ ಸುಮಾರು 2041 ಎಕರೆ ಅರಣ್ಯ ಭೂಮಿ ಒತ್ತುವರಿಯಾಗಿದೆ. ಈ ಪೈಕಿ ಕಳೆದ 2 ವರ್ಷದಲ್ಲಿ ಸುಮಾರು 4000 ಕೋಟಿ ರೂ. ಬೆಲೆ ಬಾಳುವ 128 ಎಕರೆ ಅರಣ್ಯ ಭೂಮಿಯ ಒತ್ತುವರಿಯನ್ನು ತೆರವು ಮಾಡಿಸಲಾಗಿದೆ ಎಂದು ವಿವರಿಸಿದರು.

# ಡಿಕೆಶಿಗೆ ಎಚ್‌ಡಿಕೆ ತಿರುಗೇಟು ಡಿಕೆಶಿಯಿಂದ ಬಟ್ಟೆ ಪಡೆಯುವ ದಾರಿದ್ರ್ಯ ನನಗಿಲ್ಲ

**ಬೆಂಗಳೂರು,ಜೂ.20–**ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರಿಂದ ಬಟ್ಟೆ ಹೊಲಿಸಿಕೊಳ್ಳುವಷ್ಟು ದಾರಿದ್ರವನ್ನು ನಾಡಿನ ಜನತೆ ನನಗೆ ಕೊಟ್ಟಿಲ್ಲ. ಆ ಪಾಪದ ಹಣ ಲೂಟಿ ಹೊಡೆದಿರುವ ಹಣ ಮಾಡಿರುವ ಅವನಿಂದ ನಾನು ಬಟ್ಟೆ ತರಿಸಿಕೊಳ್ಳಬೇಕಾ ಎಂದು ಕೇಂದ್ರ ಸಚಿವ ಎಚ್.ಡಿ ಕುಮಾರಸ್ವಾಮಿ ಡಿ.ಕೆ ಶಿವಕುಮಾರ್ ಅವರ ವಿರುದ್ಧ ಏಕವಚನದಲ್ಲೇ ವಾಗ್ದಾಳಿ ನಡೆಸಿದ್ದಾರೆ.

2028ಕ್ಕೆ ಜೆಡಿಎಸ್ –ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದರೆ ನಾನೇ ಕುಮಾರಸ್ವಾಮಿಗೆ ಬಟ್ಟೆ ಹೊಲಿಸಿಕೊಡುತ್ತೇನೆ ಎಂಬ ಡಿ.ಕೆ ಶಿವಕುಮಾರ್ ಅವರ ವ್ಯಂಗ್ಯಭರಿತ ಹೇಳಿಕೆಗೆ ತಿರುಗೇಟು ನೀಡಿದ ಕುಮಾರಸ್ವಾಮಿ, ಡಿ.ಕೆಶಿಯಿಂದ ಬಟ್ಟೆ ಹೊಲಿಸಿಕೊಳ್ಳುವಷ್ಟು ದಾರಿದ್ರ್ಯ ನನಗಿಲ್ಲ. ನನಗೆ ಬಟ್ಟೆ ಬೇಕಾದರೆ ನನ್ನನ್ನು ಬೆಳೆಸಿರುವ ನಾಡಿನ ಜನತೆ ಕೊಡುತ್ತಾರೆ. ಪಾಪದ ಹಣ ಲೂಟಿ ಹೊಡೆದ ಹಣದಿಂದ ಬಟ್ಟೆ ತರಿಸಿಕೊಳ್ಳಬೇಕಾ ಎಂದು ವಾಗ್ದಾಳಿ ನಡೆಸಿದರು.

ಡಿ.ಕೆ ಶಿವಕುಮಾರ್ ಅವರಿಗೆ ದುಡ್ಡಿನ ದಾರಿದ್ರ್ಯ ಇದೆ. ಹಾಗಾಗಿ ಲೂಟಿ ಹೊಡೆಯುತ್ತಿದ್ದಾರೆ. ಆ ಹಣದಿಂದ ನಾನು ಬಟ್ಟೆ ತರಿಸಿಕೊಳ್ಳುವಷ್ಟು ದಾರಿದ್ರ್ಯವನ್ನು ನಾಡಿನ ಜನತೆ ನೀಡಿಲ್ಲ ಎಂದು ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡುತ್ತ ಹೇಳಿದರು.ಮಾಜಿ ಸಂಸದ ಡಿ.ಕೆ ಸುರೇಶ್ ಅವರು ಬಮೂಲ್ ಅಧ್ಯಕ್ಷರಾಗಿ ಆಯ್ಕೆಯಾಗಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ಸರ್ಕಾರ ಇದೆ, ಮಾಡಿಕೊಳ್ಳುತ್ತಾರೆ ಅದೆಲ್ಲ ಈಗ ಬೇಡ. ಮುಂದೆ ಮಾತನಾಡುತ್ತೇನೆ ಎಂದರು.

**ದ್ವೇಷದ ರಾಜಕಾರಣ–** ಕೇತಗಾನಹಳ್ಳಿ ಭೂ ಒತ್ತುವರಿ ತೆರವಿಗೆ ರಚಿಸಿದ್ದ ಎಸ್‌ಐಟಿಗೆ ಹೈಕೋರ್ಟ್ ತಡೆ ನೀಡಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ಅದು 40 ವರ್ಷಗಳ ಹಿಂದೆ ಖರೀದಿ ಮಾಡಿದ ಭೂಮಿ. ಅಲ್ಲಿ ಅತಿಕ್ರಮಣ ಆಗಿಲ್ಲ.ಕಾನೂನು ವ್ಯಾಪ್ತಿಯಲ್ಲೆ ಇದೆ ಎಂದು ನಾನು ಈ ಹಿಂದೆ ಹೇಳಿದ್ದೇನೆ.ನ್ಯಾಯಾಲಯದಲ್ಲಿ ತೀರ್ಮಾನ ಆಗುತ್ತೆ ಎಂದು ಹೇಳಿರುವ ಅವರು, ಕೇಂದ್ರ ಸರ್ಕಾರ ರಾಜಕೀಯ ಮಾಡುತ್ತಿದೆ ಎಂದು ಹೇಳುತ್ತಾರೆ. ಇವರು ಮಾಡುತ್ತಿರುವುದು ಏನು? ರಾಜ್ಯಸರ್ಕಾರದ ಅಧಿಕಾರಿಗಳನ್ನಿಟ್ಟುಕೊಂಡು ದ್ವೇಷದ ರಾಜಕಾರಣ ಮಾಡುತ್ತಿದ್ದಾರೆ. ಇದಕ್ಕೆಲ್ಲ ಕಾಲವೇ ಉತ್ತರ ನೀಡುತ್ತೆ ಎಂದು ಕುಮಾರಸ್ವಾಮಿ ಮಾರ್ಮಿಕವಾಗಿ ಹೇಳಿದರು.

**ಅಚ್ಚರಿ ಏನಿಲ್ಲ–**ವಸತಿ ಇಲಾಖೆಯ ಮನೆ ಹಂಚಿಕೆಯಲ್ಲಿ ಭ್ರಷ್ಟಾಚಾರ ಇದೆ ಎಂಬ ಕಾಂಗ್ರೆಸ್ ಶಾಸಕ ಬಿ.ಆರ್ ಪಾಟೀಲ್ ಅವರು ಹೇಳಿರುವುದರಲ್ಲಿ ಅಚ್ಚರಿಯೇನಿಲ್ಲ. ನಿಮಗೆ ಅಚ್ಚರಿನಾ ಎಂದು ಪ್ರಶ್ನಿಸಿದ ಅವರು, ಎಲ್ಲ ಇಲಾಖೆಯಲ್ಲೂ ಕಮಿಷನ್ ನಡೆಯುತ್ತಿದೆ. ಕಂದಾಯ ಸಚಿವ ಕೃಷ್ಣಬೈರೇಗೌಡ ಅವರು ನಿನ್ನೆ ಅಧಿಕಾರಿಗಳಿಗೆ ರೇಟ್ ಎಷ್ಟು ಫಿಕ್ಸ್ ಮಾಡಿದ್ದೀರ ಎಂಬುದನ್ನು ಪ್ರಶ್ನಿಸಿದ್ದಾರೆ. ಇಲಾಖಾ ಮಂತ್ರಿಗಳಿಗೆ ಇಲಾಖೆಯಲ್ಲಿ ಯಾವ ರೀತಿ ಕೆಲಸ ನಡೆಯುತ್ತಿದೆ ಎಂಬುದು ಗೊತ್ತಿದೆ. ಬಿ.ಆರ್‌ಪಾಟೀಲ್ ಅವರು ಯೋಜನಾ ಆಯೋಗದ ಉಪಾಧ್ಯಕ್ಷರು ಅವರೇ ಲಂಚದ ಬಗ್ಗೆ ಹೇಳುತ್ತಾರೆ. ನಾನು ಹೇಳುತ್ತಿಲ್ಲ, ವಿರೋಧ ಪಕ್ಷ ಹೇಳುತ್ತಾ ಇಲ್ಲ ಈಗ ಹಣ ಮಾಡಿಕೊಂಡರೆ ಚುನಾವಣೆ ನಡೆಸಬಹುದು ಎಂದು ಕಾಂಗ್ರೆಸ್‌ನ ಮನಃಸ್ಥಿತಿ ಎಂದು ಟೀಕಿಸಿದರು.

## ರಾಷ್ಟ್ರಪತಿ ದೌಪದಿ ಮುರ್ಮು ಜನ್ಮದಿನಕ್ಕೆ ಗಣ್ಯರಿಂದ ಶುಭಾಷಯ

ನವದೆಹಲಿ, ಜೂ.20– ರಾಷ್ಟ್ರಪತಿ ದೌಪದಿ ಮುರ್ಮು ಅವರ 67ನೇ ಹುಟ್ಟುಹಬ್ಬಕ್ಕೆ ಪ್ರಧಾನಿ ನರೇಂದ್ರ ಮೋದಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸೇರಿದಂತೆ ನಾಡಿನ ಹಲವಾರು ಗಣ್ಯರು ಶುಭ ಕೋರಿದ್ದಾರೆ.ಮುರ್ಮು ಅವರ ಜೀವನ ಮತ್ತು ನಾಯಕತ್ವವು ದೇಶಾದ್ಯಂತ ಕೋಟ್ಯಂತರ ಜನರಿಗೆ ಸ್ಫೂರ್ತಿ ನೀಡುತ್ತಲೇ ಇದೆ ಎಂದು ಮೋದಿ ಎಕ್ಸ್ ಮಾಡಿದ್ದಾರೆ.

ರಾಷ್ಟ್ರಪತಿ ಜಿ ಅವರಿಗೆ ಹೃತ್ಪೂರ್ವಕ ಹುಟ್ಟುಹಬ್ಬದ ಶುಭಾಶಯಗಳು. ಅವರ ಜೀವನ ಮತ್ತು ನಾಯಕತ್ವವು ದೇಶಾದ್ಯಂತ ಕೋಟ್ಯಂತರ ಜನರಿಗೆ ಸ್ಫೂರ್ತಿ ನೀಡುತ್ತಲೇ ಇದೆ. ಸಾರ್ವಜನಿಕ ಸೇವೆ, ಸಾಮಾಜಿಕ ನ್ಯಾಯ ಮತ್ತು ಸಮಗ್ರ ಅಭಿವೃದ್ಧಿಗೆ ಅವರ ಅಚಲ ಬದ್ಧತೆ ಎಲ್ಲರಿಗೂ ಭರವಸೆ ಮತ್ತು ಶಕ್ತಿಯ ದಾರಿದೀಪವಾಗಿದೆ ಎಂದು ಮೋದಿ ಎಕ್ಸ್‌ನಲ್ಲಿ ತಿಳಿಸಿದ್ದಾರೆ.

ಅದೇ ರೀತಿ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿ, ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಸೇರಿದಂತೆ ಹಲವಾರು ಗಣ್ಯರು ರಾಷ್ಟ್ರಪತಿಗಳಿಗೆ ಹುಟ್ಟು ಹಬ್ಬದ ಶುಭಾಷಯ ಕೋರಿದ್ದಾರೆ.

## ಅಮೆರಿಕ ಪ್ರವಾಸಕ್ಕೆ ಅನುಮತಿ ಕೋರಿ ನ್ಯಾಯಾಲಯದಲ್ಲಿ ಪ್ರಶ್ನಿಸಬಹುದು

**ಬೆಂಗಳೂರು, ಜೂ.20–** ಅಮೆರಿಕ ಪ್ರವಾಸಕ್ಕೆ ಕೇಂದ್ರ ಸರ್ಕಾರ ಅನುಮತಿ ನೀಡದೇ ಇದ್ದರೆ ನ್ಯಾಯಾಲಯದಲ್ಲಿ ಪ್ರಶ್ನಿಸುವಂತೆ ಕೇಂದ್ರದ ಮಾಜಿ ಸಚಿವ ಪಿ.ಚಿದಂಬರಂರವರು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವ ಪ್ರಿಯಾಂಕ್ ಖರ್ಗೆಗೆ ಸಲಹೆ ನೀಡಿದ್ದಾರೆ.

ಸಾಮಾಜಿಕ ಜಾಲತಾಣದಲ್ಲಿ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿರುವ ಪಿ.ಚಿದಂಬರಂ, ಅಮೆರಿಕದಲ್ಲಿ ನಡೆಯುವ ಕೆಲ ಕಾರ್ಯಕ್ರಮಗಳಿಗೆ ಆಹ್ವಾನದ ಮೇರೆಗೆ ತೆರಳಲು ಪ್ರಿಯಾಂಕ್ ಖರ್ಗೆ ಮುಂದಾಗಿದ್ದರು. ಅಲ್ಲಿ ಬಂಡವಾಳ ಹೂಡಿಕೆದಾರರು ಹಾಗೂ ವಿವಿಧ ಕ್ಷೇತ್ರಗಳ ಪರಿಣಿತರ ಜೊತೆ ಚರ್ಚೆ ನಿಗದಿಯಾಗಿತ್ತು. ಆದರೆ ಪ್ರಿಯಾಂಕ್ ಖರ್ಗೆಯವರಿಗೆ ಅಮೆರಿಕ ಪ್ರವಾಸಕ್ಕೆ ಅನುಮತಿ ನೀಡದೆ ಭಾರೀ ನಿರಾಸೆ ಮಾಡಲಾಗಿದೆ ಎಂದು ಆರೋಪಿಸಿದ್ದಾರೆ.

ಈ ಬಗ್ಗೆ ಕೇಂದ್ರ ಸರ್ಕಾರ ತಕ್ಷಣವೇ ಉತ್ತರ ನೀಡಬೇಕು. ಆ ಉತ್ತರ ಸಮರ್ಪಕವಾಗಿಲ್ಲ ಎಂದಾದರೆ ಪ್ರಿಯಾಂಕ್ ಖರ್ಗೆಯವರು ಅದನ್ನು ನ್ಯಾಯಾಲಯದಲ್ಲಿ ಪ್ರಶ್ನಿಸಬಹುದಾಗಿದೆ.ಪ್ರತಿಯೊಬ್ಬರಿಗೂ ಪ್ರವಾಸ ಮಾಡುವ ಮತ್ತು ಮಾತನಾಡುವ ಸ್ವಾತಂತ್ರ್ಯ ಇದೆ. ಕೇಂದ್ರ ಸರ್ಕಾರ ಇದಕ್ಕೆ ಕಡಿವಾಣ ಹಾಕಲು ಸರ್ವಾಧಿಕಾರಿಯಂತೆ ವರ್ತಿಸುವುದು ಸರಿಯಲ್ಲ ಎಂದು ಚಿದಂಬರಂ ಅಭಿಪ್ರಾಯಪಟ್ಟಿದ್ದಾರೆ.



ಯುವ ಮಾರ್ಗ



### ಶಾಲಾ ಕೆಲಸಕ್ಕೆ ಮಕ್ಕಳ ಬಳಕೆ ಉಪ ಪ್ರಾಚಾರ್ಯ ವಿರುದ್ಧ ಕ್ರಮಕ್ಕೆ ದಸಂಸ ಒತ್ತಾಯ

# ಪುಂಡರ ಅಡ್ಡೆಯಾದ ಪದವಿ ಪೂರ್ವ ಕಾಲೇಜು ಪ್ರೌಢ ಶಾಲಾ ವಿಭಾಗ..!!

■ ಹನುಮಂತ ಕನ್ನಾಳ

**ಲಿಂಗಸೂಗೂರು,ಜೂ.20–**ಪಟ್ಟಣದ ಕ್ಷೇತ್ರ ಶಿಕ್ಷಣಾಧಿಕಾರಿಗಳು ಕಚೇರಿಗೆ ಹೊಂದಿಕೊಂಡಿರುವ ಪದವಿ ಪೂರ್ವ ಕಾಲೇಜು. (ಪ್ರೌಢಶಾಲಾ ವಿಭಾಗ) ಶಾಲೆ ಪುಂಡ ಪೋಕರಿಗಳ ತಾಣವಾಗಿ ಮಾರ್ಪಟಿದೆ. ಸಂಜೆಯಾಗುತ್ತಿದ್ದಂತೆ ಪುಂಡ ಪೋಕರಿಗಳು ಶಾಲೆ ಆವರಣಕ್ಕೆ ನುಗ್ಗಿ ಜೂಜಾಟ ಮದ್ಯ ಪಾನ ಮಾಡುತ್ತಿದ್ದಾರೆ. ಆದರೆ ಈ ಬಗ್ಗೆ ಗಮನ ಹರಿಸಬೇಕಾದ ಉಪ ಪ್ರಾಚಾರ್ಯರು ಏನಾದರೂ ಆಗಲಿ ಹಾಳಾಗಿ ಹೋಗಲಿ ನಮಗೇಕು ಎಂದು ಕಣ್ಮುಚ್ಚಿಕೊಂಡು ಕುಳಿತ್ತಿದ್ದಾರೆ.






ಪಟ್ಟಣದ ಶಾಲಾ ಶಿಕ್ಷಣದಲ್ಲಿ ಗುಣಾತ್ಮಕ ಬದಲಾವಣೆ ತರಲು ಹಾಗೂ ಶಾಲಾ ಆಡಳಿತದಲ್ಲಿ ಸಮುದಾಯದ ಸಕ್ರಿಯ ಪಾತ್ರವನ್ನು ಖಚಿತಪಡಿಸಲು ರಾಜ್ಯದ ಎಲ್ಲಾ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ್ಲಿ ಶಾಲಾ ಅಭಿವೃದ್ಧಿ ಹಾಗೂ ಮೇಲುಸ್ತುವಾರಿ ಸಮತಿ (ಎಸ್‌ಡಿಎಂಸಿ)ಗಳ ರಚನೆ ಮಾಡಲು ಸರ್ಕಾರ ಆದೇಶ ಇದೆ. ಆದರೆ ಪಟ್ಟಣದ ಪದವಿ ಪೂರ್ವ ಕಾಲೇಜು(ಪ್ರೌಢಶಾಲಾ ವಿಭಾಗ)ದಲ್ಲಿ ಕಳೆದ 2–3 ವರ್ಷಗಳಿಂದ ಎಸ್‌ಡಿಎಂಸಿ ಯನ್ನು ರಚನೆ ಮಾಡಿಲ್ಲ. ಇದರಿಂದಾಗಿ ಶಾಲಾಭಿವೃದ್ಧಿ ಕುಂಠಿತಗೊಂಡಿದೆ ಎಂದು ಪಾಲಕರು ಹಾಗೂ ಸಾರ್ವಜನಿಕರು ಆರೋಪಿಸಿದ್ದಾರೆ.

ಶಾಲೆಗಳು ಪರಿಣಾಮಕಾರಿಯಾಗಿ ಕೆಲಸ ಮಾಡುವುದನ್ನು ಖಚಿತಪಡಿಸಿಕೊಳ್ಳಲು, ದಾಖಲಾತಿ/ ಹಾಜರಾತಿ ಶಿಕ್ಷಣ ಗುಣಮಟ್ಟ ಸುಧಾರಣೆಯಲ್ಲಿರುವ ಸಮಸ್ಯೆಗಳನ್ನು ಪರಿಹರಿಸಲು, ತರಗತಿಯ ಚಟುವಟಿಕೆಗಳನ್ನು ಶಿಸ್ತುಬದ್ಧವಾಗಿ ಸಂಘಟಿಸಲು, ಸಂಪನ್ಮೂಲಗಳನ್ನು ಕ್ರೋಢೀಕರಿಸಲು ಎಸ್‌ಡಿಎಂಸಿ ಅವಶ್ಯವಾಗಿದೆ. ಆದರೆ ಇಲ್ಲಿನ ಉಪ ಪ್ರಾಚಾರ್ಯರು ಎಸ್‌ಡಿಎಂಸಿ ರಚನೆ ಮಾಡಿ ಎಂದರೆ ಅದನ್ನು ಮಾಡುವುದು ಬಿಡುವುದು ನನಗೆ ಬಿಟ್ಟಿದ್ದು, ನೀವು ಯಾರು ಕೇಳಲು ಎಂದು ಸಂಘಟನೆ ಮುಖಂಡರಿಗೆ ಹೇಳುತ್ತಿರು ವುದು ಅವರ ಕಾರ್ಯವೈಖರಿಗೆ ಸಾಕ್ಷಿ ಯಾಗಿದೆ.

ಶಾಲೆಯ ಕಂಪೌಂಡ್ ಬಿದ್ದು, 2 ವರ್ಷ ಕಳೆದಿವೆ. ಇದರಿಂದಾಗಿ ಬೀಡಾಡಿ ದನಗಳು ಹಾಗೂ ಕುಡಕರ ಕಾಟ ಹೆಚ್ಚಾಗಿದೆ. ರಾತ್ರಿಯಾಗುತ್ತಿದ್ದಂತೆ ಶಾಲೆ ಆವರಣದಲ್ಲಿ ಮದ್ಯಪಾನ ಮಾಡಿ ಬಾಟಲಿ ಇನ್ನಿತರ ಸಾಮಾನ್ಯಗಳನ್ನು ಶಾಲೆಯಲ್ಲಿ ಬೀಸಾಡಿ ಹೋಗುತ್ತಿದ್ದಾರೆ. ಶಿಕ್ಷಕರು ಹಾಗೂ ಸಿಪಾಯಿಗಳಿಗೆ ಬೆಳಿಗ್ಗೆ ಶಾಲೆಗೆ ಬಂದು ಸ್ವಚ್ಛಗೊಳಿಸವುದೇ ದಿನನಿತ್ಯದ ಕೆಲಸವಾಗಿದೆ.

**ಬೇಜವಾಬ್ದಾರಿ ಉಪ ಪ್ರಾಚಾರ್ಯರರಿಂದ ಸರ್ಕಾರಿ ಶಾಲೆಗಳು ಮುಚ್ಚುವ ಪರಿಸ್ಥಿತಿ ನಿರ್ಮಾಣವಾಗಿದೆ. ಇವರು ಹೀಗೆಯೇ ಮುಂದುವರೆದರೆ ಪ್ರೌಢಶಾಲೆಯನ್ನು ಮುಚ್ಚವ ಪರಿಸ್ಥಿತಿ ಬಂದರೂ ಬರಬಹುದು. ಕಾರಣ ಸರ್ಕಾರಿ ಪದವಿ ಪೂರ್ವ ಕಾಲೇಜು( ಪ್ರೌಢಶಾಲಾ ವಿಭಾಗ) ಉಪ ಪ್ರಾಚಾರ್ಯರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಹಾಗೂ ಕೂಡಲೇ ಎಸ್‌ಡಿಎಂಸಿ ಸಮಿತಿಯನ್ನು ರಚಿಸಬೇಕು.**

**– ದಲಿತ ಮುಖಂಡರಾದ ಮೋಹನ್ ಗೋಸ್ಲೇ, ಆಜಪ್ಪ ಕರಡಕಲ್, ಅಮರೇಶ ನಾಯಕ, ದುರಗಪ್ಪ ನಾಯಕ ಹೊನ್ನಳ್ಳಿ**

**ಉಪ ಪ್ರಾಚಾರ್ಯರರ ಬಳಿ ಈಗಾಗಲೇ ಮಾತನಾಡಿದ್ದೇನೆ. ಈಗ ಮಕ್ಕಳ ಶಾಲಾ ದಾಖಲಾತಿ ಪ್ರಾರಂಭವಾಗಿವೆ. ಶಾಲಾ ದಾಖತಿ ಮುಗಿದ ನಂತರ ಮುಂದಿನ ತಿಂಗಳಲ್ಲಿ ಪೋಷಕರ ಸಭೆ ಕರೆದು ಎಸ್‌ಡಿಎಂಸಿ ರಚನೆ ಮಾಡುತ್ತೇವೆಂದು ತಿಳಿಸಿದ್ದಾರೆ. ಇನ್ನು ಮಕ್ಕಳಿಗೆ ಕೆಲಸ ಹಚ್ಚಿರುವ ವಿಷಯದ ಬಗ್ಗೆ ದೂರು ಕೊಟ್ಟರೆ ಮುಂದಿನ ಕ್ರಮ ಕೈಗೊಳ್ಳುತ್ತೇವೆ**

**– ಹನುಮಂತಪ್ಪ ಕುಳಗೇರಿ,ಪ್ರಭಾರಿ ಬಿಇಒ ಲಿಂಗಸುಗೂರು**

**ವಿದ್ಯಾರ್ಥಿಗಳಿಂದ ಕೆಲಸ :** ಶಾಲೆಯ ಕೆಲಸ ಕಾರ್ಯಗಳನ್ನು ಮಾಡಲು ಇಬ್ಬರು ಸಿಪಾಯಿಗಳಿದ್ದಾರೆ, ಅಲ್ಲದೇ ಅಡಿಗೆ ಕೆಲಸದವರು ಇದ್ದರು ಸಹ ಶಾಲೆಯ ವಿದ್ಯಾರ್ಥಿಗಳಿಂದ ಮಾಡಿಸುತ್ತಿದ್ದಾರೆ. ವಿದ್ಯಾರ್ಥಿಗಳೇ ಅಕ್ಕಿ ಚೀಲವನ್ನು ಹೊತ್ತುಕೊಂಡು ಅಡುಗೆ ಕೋಣೆಗೆ ತೆಗೆದುಕೊಂಡು ಹೋಗಬೇಕು. ಇಂತಹ ದೊಡ್ಡ ಚೀಲಗಳನ್ನು ಚಿಕ್ಕ ಮಕ್ಕಳಿಂದ ಮಾಡಿಸುವಾಗ ಮಕ್ಕಳಿಗೆ ಹೆಚ್ಚು ಕಡಿಮೆಯಾದರೆ ಅದಕ್ಕೆ ಯಾರು ಹೊಣೆ.

## ಜೂನ್ 21ರಂದು ವಿದ್ಯುತ್ ಗ್ರಾಹಕರ ಸಂವಾದ ಸಭೆ

**ರಾಯಚೂರು,ಜೂ.20–**ಇಲ್ಲಿನ ಜೆಸ್ಕಾಂ ಇಲಾಖೆಯ ಕಾರ್ಯ ಮತ್ತು ಪಾಲನೆ ಉಪ ವಿಭಾಗ–1 ಕಚೇರಿಯಲ್ಲಿ ಜೂನ್ 21ರ ಬೆಳಗ್ಗೆ 11 ರಿಂದ 1 ಗಂಟೆವರೆಗೆ ಗ್ರಾಹಕರ ಸಂವಾದ ಸಭೆ ಏರ್ಪಡಿಸಲಾಗಿದೆ. ವಿದ್ಯುತ್ ಗ್ರಾಹಕರು ಹಾಜಾರಾಗಿ ತಮ್ಮ ವಿದ್ಯುತ್ ದೂರುಗಳ ಬಗ್ಗೆ ಸಭೆಯಲ್ಲಿ ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ ಎಂದು ಜೆಸ್ಕಾಂ ಇಲಾಖೆಯ ಕಾರ್ಯ ಮತ್ತು ಪಾಲನೆ ಉಪ ವಿಭಾಗ–1ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

## ಮೂವರು ಕಾರುಗಳ್ಳರ ಬಂಧನ. 12 ಲಕ್ಷ ರೂ. ಮೌಲ್ಯದ 6 ಕಾರುಗಳು ಜಪ್ತಿ



**ಬೆಂಗಳೂರು,ಜೂ.20–**ನಗರದ ವಿವಿಧ ಕಡೆಗಳಲ್ಲಿ ಕಾರುಗಳನ್ನು ಕಳ್ಳತನ ಮಾಡುತ್ತಿದ್ದ ಮೂವರು ಆರೋಪಿಗಳನ್ನು ವಿದ್ಯಾರಣ್ಯಪುರ ಠಾಣೆ ಪೊಲೀಸರು ಬಂಧಿಸಿ 12 ಲಕ್ಷ ರೂ. ಮೌಲ್ಯದ ಆರು ಕಾರುಗಳನ್ನು ವಶಪಡಿಸಿಕೊಂಡಿದ್ದಾರೆ.

ಉಮೇಶ್, ತಬ್ರೆಜ್ ಮತ್ತು ಜಬಿ ಖಾನ್ ಬಂಧಿತ ಆರೋಪಿಗಳು. 2020 ರಲ್ಲಿ ಕಾಮಾಕ್ಷಿಪಾಳ್ಯ ಪೊಲೀಸ್ ಠಾಣೆವ್ಯಾಪ್ತಿಯಲ್ಲಿ ಟ್ರ್ಯಾಕ್ಟರ್ ಕಳ್ಳತನ ಪ್ರಕರಣದಲ್ಲಿ ಈ ಮೂವರು ಪೊಲೀಸರಿಗೆ ಸಿಕ್ಕಿ ಬಿದ್ದು ಜೈಲಿಗೆ ಹೋಗಿ ಬಂದಿದ್ದರು.

ನಂತರದ ದಿನಗಳಲ್ಲಿ ಈ ಮೂವರು ತಮ ಚಾಳಿಯನ್ನು ಬದಲಿಸಿಕೊಂಡಿಲ್ಲ. ಟ್ರ್ಯಾಕ್ಟರ್ ಕಳ್ಳತನ ಬಿಟ್ಟು, ಕಳೆದ ಮೇ ತಿಂಗಳಿನಲ್ಲಿ ವಿದ್ಯಾರಣ್ಯಪುರ ಪೊಲೀಸ್? ಠಾಣೆ ವ್ಯಾಪ್ತಿಯಲ್ಲಿ ಕಾರು ಕಳ್ಳತನ ಮಾಡಿದ್ದಾರೆ.

ಕಾರು ಕಳ್ಳತನ ದೃಶ್ಯ ಸಿಸಿ ಟಿವಿಯಲ್ಲಿ ಸೆರೆಯಾಗಿತ್ತು. ಈ ಪ್ರಕರಣದ ತನಿಖೆ ಕೈಗೊಂಡ ಪೊಲೀಸರು ಮೂವರನ್ನು ಬಂಧಿಸಿ, ವಿಚಾರಣೆಗೆ ಒಳಪಡಿಸಿ 12 ಲಕ್ಷ ರೂ. ಮೌಲ್ಯದ 6 ಓಮ್ನಿ ಕಾರುಗಳನ್ನು ವಶಪಡಿಸಿಕೊಂಡಿದ್ದಾರೆ.

## ತೀವ್ರ ಅತಿಸಾರ ಭೇದಿ ನಿಯಂತ್ರಣಕ್ಕೆ ಟಾಸ್ಕ್‌ಫೋರ್ಸ್ ಸಭೆ: ಮಳೆಗಾಲದ ಕಾಯಿಲೆಗಳ ಬಗ್ಗೆ ಜಾಗೃತಿ



**ಯುವ ಮಾರ್ಗ ಸುದ್ದಿ**

**ಮಾನ್ವಿ,ಜೂ.20–**ಪಟ್ಟಣದ ತಹಸೀಲ್ದಾರ್ ಕಚೇರಿ ಸಭಾಂಗಣದಲ್ಲಿ ಆರೋಗ್ಯ ಇಲಾಖೆ ಆಯೋಜಿಸಿದ್ದ ತೀವ್ರತರ ಅತಿಸಾರ ಭೇದಿ ನಿಯಂತ್ರಣ ಪಾಕ್ಷಿಕ ಕಾರ್ಯಕ್ರಮದ ತಾಲ್ಲೂಕು ಮಟ್ಟದ ಟಾಸ್ಕ್ ಫೋರ್ಸ್ ಸಮಿತಿ ಸಭೆ ಜರುಗಿತು.

ಮಳೆಗಾಲದಲ್ಲಿ ಸಾಮಾನ್ಯವಾಗಿ ಕಂಡುಬರುವ ಅತಿಸಾರ, ಕಾಲರಾ, ಡೆಂಗ್ಯೂ, ಮಲೇರಿಯಾ ಮುಂತಾದ ಕಾಯಿಲೆಗಳನ್ನು ನಿಯಂತ್ರಿಸಲು ಅಗತ್ಯವಿರುವ ಎಲ್ಲ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ತಾಲ್ಲೂಕು ಆರೋಗ್ಯಧಿಕಾರಿ ಡಾ. ಶರಣಬಸವ ರಾಜ ಈ ಸಂದರ್ಭದಲ್ಲಿ ಮಾಹಿತಿ ನೀಡಿದರು.

**ಮಕ್ಕಳ ಆರೋಗ್ಯಕ್ಕೆ ಆದ್ಯತೆ**

ಆರೋಗ್ಯ ಇಲಾಖೆಯ ಕಾರ್ಯಕರ್ತರು ತಾಲ್ಲೂಕಿನಾದ್ಯಂತ ಮನೆ ಮನೆಗೆ ಭೇಟಿ ನೀಡಿ ಕಾಯಿಲೆಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುತ್ತಿದ್ದಾರೆ. ಕಾಯಿಲೆಯ ಲಕ್ಷಣಗಳಿರುವವರನ್ನು ಗುರುತಿಸಿ ಸಮೀಪದ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಡಾ.ಶರಣಬಸವರಾಜ ವಿವರಿಸಿದರು. ವಿಶೇಷವಾಗಿ, ಮಳೆಗಾಲದಲ್ಲಿ ಅಶುದ್ಧ ಕುಡಿಯುವ ನೀರಿನಿಂದಾಗಿ 1 ರಿಂದ 5 ವರ್ಷದೊಳಗಿನ ಮಕ್ಕಳಲ್ಲಿ ತೀವ್ರತರ ಅತಿಸಾರ ಭೇದಿ ಕಾಣಿಸಿಕೊಳ್ಳುವ ಸಾಧ್ಯತೆ ಹೆಚ್ಚಿರುತ್ತದೆ. ಮಗುವಿಗೆ ದಿನಕ್ಕೆ ಮೂರಕ್ಕಿಂತ ಹೆಚ್ಚು ಬಾರಿ ಭೇದಿಯಾದರೆ, ತಕ್ಷಣವೇ ಆರೋಗ್ಯ ಇಲಾಖೆ ಒದಗಿಸುವ ಒ.ಆರ್.ಎಸ್. ದ್ರಾವಣ ಮತ್ತು ಜಿಂಕ್ ಮಾತ್ರೆಗಳನ್ನು ನೀಡಬೇಕು. ಅಲ್ಲದೆ, ತಕ್ಷಣವೇ ಹತ್ತಿರದ ಸರ್ಕಾರಿ ಆಸ್ಪತ್ರೆಯ ವೈದ್ಯರಿಂದ ಚಿಕಿತ್ಸೆ ಕೊಡಿಸುವ ಮೂಲಕ ಮಗುವನ್ನು ಅಪಾಯದಿಂದ ಪಾರು ಮಾಡಬಹುದು ಎಂದು ಅವರು ಒತ್ತಿ ಹೇಳಿದರು. ತಾಲ್ಲೂಕಿನ ಎಲ್ಲಾ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮತ್ತು ಉಪ ಆರೋಗ್ಯ ಕೇಂದ್ರಗಳಲ್ಲಿ ಪಾಲಕರಿಗೆ ಒ.ಆರ್.ಎಸ್. ದ್ರಾವಣ ತಯಾರಿಸುವ ವಿಧಾನದ ಬಗ್ಗೆ ಮಾಹಿತಿ ನೀಡಲಾಗುತ್ತಿದೆ. ಇದರೊಂದಿಗೆ, ತಾಲ್ಲೂಕಿನ ಎಲ್ಲಾ ಶಾಲೆಗಳು ಮತ್ತು ವಸತಿ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಶುದ್ಧ ಕುಡಿಯುವ ನೀರನ್ನು ಒದಗಿಸುವಂತೆ ಸೂಚಿಸಲಾಗಿದೆ. ವೈಯಕ್ತಿಕ ಸ್ವಚ್ಛತೆ, ಸುರಕ್ಷಿತ ಕೈತೊಳೆಯುವ ವಿಧಾನಗಳು ಮತ್ತು ಶೌಚಾಲಯಗಳ ಬಳಕೆಯ ಕುರಿತು ಮಕ್ಕಳಲ್ಲಿ ಜಾಗೃತಿ ಮೂಡಿಸುವ ಮೂಲಕ ಕಾಯಿಲೆಗಳನ್ನು ತಡೆಗಟ್ಟಲು ಒತ್ತು ನೀಡಲಾಗುತ್ತಿದೆ.

**ಸೊಳ್ಳೆ ನಿಯಂತ್ರಣ ಮತ್ತು ನೈರ್ಮಲ್ಯಕ್ಕೆ ಒತ್ತು**

ಮಾನ್ವಿ ತಾಲ್ಲೂಕಿನಲ್ಲಿ ಈ ಬಾರಿ 2 ಡೆಂಗ್ಯೂ ಪ್ರಕರಣಗಳು ದೃಢಪಟ್ಟಿರುವ ಹಿನ್ನೆಲೆಯಲ್ಲಿ, ಸೊಳ್ಳೆ ನಿಯಂತ್ರಣಕ್ಕೆ ವಿಶೇಷ ಗಮನ ಹರಿಸಲು ನಿರ್ಧರಿಸಲಾಗಿದೆ. ತಾಲ್ಲೂಕು ಪಂಚಾಯಿತಿ ವತಿಯಿಂದ ಎಲ್ಲಾ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ಸಾರ್ವಜನಿಕರಿಗೆ ಕುಡಿಯುವ ನೀರು ಪೂರೈಸುವ ಟ್ಯಾಂಕ್‌ಗಳನ್ನು ಸ್ವಚ್ಛವಾಗಿಡುವಂತೆ ಸೂಚನೆ ನೀಡಲಾಗಿದೆ. ಗ್ರಾಮ ಪಂಚಾಯಿತಿ ವತಿಯಿಂದ ಗ್ರಾಮಗಳಲ್ಲಿ ಮತ್ತು ಪುರಸಭೆ ವತಿಯಿಂದ ಪಟ್ಟಣದಲ್ಲಿ ಸ್ವಚ್ಛ ಪರಿಸರ ನಿರ್ಮಿಸುವುದು, ಮಳೆಗಾಲದಲ್ಲಿ ನೀರು ನಿಲ್ಲದಂತೆ ನೋಡಿಕೊಳ್ಳುವುದು ಮತ್ತು ಫಾಗಿಂಗ್ ಮಾಡುವ ಮೂಲಕ ಸೊಳ್ಳೆಗಳನ್ನು ನಿಯಂತ್ರಿಸಲು ಕ್ರಮ ಕೈಗೊಳ್ಳುವುದರಿಂದ ಡೆಂಗ್ಯೂ ಮತ್ತು ಮಲೇರಿಯಾದಂತಹ ಕಾಯಿಲೆಗಳನ್ನು ತಡೆಗಟ್ಟಬಹುದು ಎಂದ ಅವರು ಅಂಗನವಾಡಿಗಳಲ್ಲಿ ಕಾಯಿಲೆ ಲಕ್ಷಣಗಳು ಕಂಡುಬಂದ ಮಕ್ಕಳನ್ನು ಗುರುತಿಸಿ ಆರೋಗ್ಯ ಇಲಾಖೆಗೆ ಮಾಹಿತಿ ನೀಡಿದಲ್ಲಿ ಸೂಕ್ತ ಚಿಕಿತ್ಸೆ ನೀಡಲಾಗುವುದು ಎಂದು ಅವರು ಭರವಸೆ ನೀಡಿದರು.

**ಅಧಿಕಾರಿಗಳಿಂದ ಸಹಕಾರಕ್ಕೆ ಕರೆ :**

ಗ್ರೇಡ್–2 ತಹಸೀಲ್ದಾರ್ ಅಬ್ದುಲ್ ವಾಹಿದ್ ಮಾತನಾಡಿ, ಮಳೆಗಾಲದಲ್ಲಿ ಕಾಣಿಸಿಕೊಳ್ಳುವ ಸಾಂಕ್ರಾಮಿಕ ಕಾಯಿಲೆಗಳ ನಿಯಂತ್ರಣಕ್ಕೆ ತಾಲ್ಲೂಕಿನ ಎಲ್ಲಾ ಇಲಾಖೆಯ ಅಧಿಕಾರಿಗಳು ಸಹಕಾರ ನೀಡಬೇಕು. ಇದರಿಂದ ತಾಲ್ಲೂಕನ್ನು ಕಾಯಿಲೆ ಮುಕ್ತಗೊಳಿಸಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಸಭೆಯಲ್ಲಿ ತೀವ್ರತರ ಅತಿಸಾರ ಭೇದಿ ನಿಯಂತ್ರಣ ಹಾಗೂ ಸೊಳ್ಳೆಗಳಿಂದ ಹರಡುವ ಕಾಯಿಲೆಗಳ ಬಗ್ಗೆ ಜಾಗೃತಿ ಮೂಡಿಸುವ ಭಿತ್ತಿಪತ್ರಗಳನ್ನು ಗ್ರೇಡ್–2 ತಹಸೀಲ್ದಾರ್ ಅಬ್ದುಲ್ ವಾಹಿದ್ ಅವರು ಬಿಡುಗಡೆಗೊಳಿಸಿದರು.ಈ ಸಭೆಯಲ್ಲಿ ಡಾ. ಅಂಬಿಕಾ ಮಧುಸೂಧನ್, ಪುರಸಭೆ ಮುಖ್ಯಾಧಿಕಾರಿ ಪರಶುರಾಮ ಮಾನೆ, ತಾಲ್ಲೂಕು ಶಿಶು ಅಭಿವೃದ್ಧಿ ಅಧಿಕಾರಿ ಮನ್ಸೂರ್ ಅಹಮ್ಮದ್, ಪರಿಶಿಷ್ಟ ವರ್ಗಗಳ ಇಲಾಖೆಯ ತಾಲ್ಲೂಕು ಕಲ್ಯಾಣಾಧಿಕಾರಿ ಮಹಲಿಂಗಪ್ಪ ಇಂಗಳದಾಳ್, ಶಿಕ್ಷಣ ಇಲಾಖೆಯ ಅಧಿಕಾರಿ ಶ್ರೀಧರ ದೇಸಾಯಿ, ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಬಾಬು ಚಿನ್ನು ಸೇರಿದಂತೆ ವಿವಿಧ ಇಲಾಖೆಗಳ ತಾಲ್ಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಯೋಗ ಅಭ್ಯಾಸದಿಂದ ದೈಹಿಕ ಮತ್ತು ಮಾನಸಿಕ ಆರೋಗ್ಯ ವೃದ್ಧಿ

**ಯುವ ಮಾರ್ಗ ಸುದ್ದಿ**

**ಮಾನ್ವಿ,ಜೂ.20–**ತಾಲೂಕಿನ ನಕ್ಕುಂದಿ ಗ್ರಾಮದಲ್ಲಿನ ಸರ್ಕಾರಿ ಉನ್ನತೀಕರಿಸಿದ ಹಿರಿಯ ಪ್ರಾಥಮಿಕ ಶಾಲೆಯ ಅವರಣದಲ್ಲಿ ಜೂ.21 ರಂದು ನಡೆಯುವ ಅಂತರಾಷ್ಟ್ರೀಯ ಯೋಗ ದಿನದ ಅಂಗವಾಗಿ ಪೂರ್ವಭಾವಿಯಾಗಿ ಆರೋಗ್ಯ ಇಲಾಖೆಯಿಂದ ವಿದ್ಯಾರ್ಥಿಗಳಿಗೆ ಮತ್ತು ಶಿಕ್ಷಕರಿಗೆ ಯೋಗ ಮತ್ತು ಅದರ ಮಹತ್ವದ ಕುರಿತು ಅರಿವು ಮೂಡಿಸುವ ಕಾರ್ಯಕ್ರಮಕ್ಕೆ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ ಚಾಲನೆ ನೀಡಿ ಮಾತನಾಡಿ ಯೋಗವು ದೇಹ ಮತ್ತು ಮನಸ್ಸನ್ನು ಒಂದುಗೂಡಿಸುವ ಸಾಧನವಾಗಿದ್ದು. ಪ್ರತಿಯೊಬ್ಬ ವಿದ್ಯಾರ್ಥಿ ಹಾಗೂ ಶಿಕ್ಷಕರು ಪ್ರತಿದಿನ ಸ್ವಲ್ಪ ಸಮಯ ಯೋಗಭ್ಯಾಸವನ್ನು ಮಾಡುವುದರಿಂದ ದೈಹಿಕ ಮತ್ತು ಮಾನಸಿಕ ಆರೋಗ್ಯ ವೃದ್ಧಿಯಾಗುತ್ತದೆ. ವಿದ್ಯಾರ್ಥಿಗಳಲ್ಲಿ



ಮಾನಸಿಕ ನೆಮ್ಮದಿ ಮತ್ತು ಶಾಂತಿಯುತ ಅಮೂಲ್ಯ ಗುಣಗಳು ಬೆಳೆಯಲು ಸಹಕಾರಿಯಾಗುತ್ತದೆ ಎಂದು ತಿಳಿಸಿದರು. ಶಾಲೆಯ ಶಿಕ್ಷಕರಾದ ಪ್ರಶಾಂತ ಮಾತನಾಡಿ ಪ್ರತಿಯೊಬ್ಬರೂ ಕೂಡ ದಿನನಿತ್ಯ ಜೀವನದಲ್ಲಿ ಯೋಗಭ್ಯಾಸವನ್ನು ರೂಡಿಸಿಕೊಂಡು ಉತ್ತಮ ಆರೋಗ್ಯ ಪಡೆದುಕೊಳ್ಳಿ ಎಂದು ಹೇಳಿದರು. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ ವಿದ್ಯಾರ್ಥಿಗಳಿಗೆ ಮತ್ತು ಶಿಕ್ಷಕರಿಗೆ ಸೂರ್ಯನಮಸ್ಕಾರ ಸೇರಿದಂತೆ ಅಗತ್ಯ ಯೋಗ ಅಸಾನಗಳ ಬಗ್ಗೆ ತಿಳಿಸಿಕೊಟ್ಟರು.

ಪ್ರಾಥಮಿಕ ಆರೋಗ್ಯ ಸುರಕ್ಷಾ ಅಧಿಕಾರಿಗಳಾದ ಶಿವಮ್ಮ,ಶಾಲೆಯ ಶಿಕ್ಷಕರಾದ ಸಿದ್ದರಾಮೇಶ್ವರ. ದೇವಮ್ಮ. ಅಂಗನವಾಡಿ ಕಾರ್ಯಕರ್ತೆಯರಾದ ಲಲಿತಮ್ಮ. ಮಹಾದೇವಿ ಹಾಗೂ ಶಾಲೆಯ ವಿದ್ಯಾರ್ಥಿಗಳು ಇದ್ದರು.

## ಪೀಪಲ್ ಟೂ ಪೀಪಲ್ ಹೆಲ್ತ್ ಫೌಂಡೇಶನ್‌ನಿಂದ ಮಹಿಳಾ ಕ್ಷೇಮಾ ತಪಾಸಣೆ ಶಿಬಿರ

**ಕವಿತಾಳ,ಜೂ.20–** ಸಿರವಾರ ತಾಲೂಕಿನ ಕವಿತಾಳ ಪಟ್ಟಣದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಪಿ ಪಿ ಎಚ್ ಎಫ್ ಹೆಲ್ತ್ ಕೇರ್ ವತಿಯಿಂದ ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಉಚಿತ ಅರೋಗ್ಯ ತಪಾಸಣೆ ಶಿಬಿರವನ್ನ ಚಾಂದ್ ಪಾಷಾ ಉದ್ಘಾಟನೆ ಮಾಡಿದರು.

ಪಿಪಲ್ ಟೂ ಪಿಪಲ್ ಹೆಲ್ತ್ ಫೌಂಡೇಶನ್ ಹೆಲ್ತ್‌ಕೇರ್ ಸಂಸ್ಥೆ ವತಿಯಿಂದ ಹಾಗೂ ಸಮುದಾಯ ಆರೋಗ್ಯ ಕೇಂದ್ರ ಕವಿತಾಳ ಸಂಯುಕ್ತಾಶ್ರಯದಲ್ಲಿ ಮಹಿಳಾ ಕ್ಷೇಮಾ ತಪಾಸಣೆ ಶಬಿರಿ ಹಮ್ಮಿಕೊಳ್ಳಲಾಯಿತು. ನಮ್ಮ ಸಂಸ್ಥೆಯ ಉದ್ದೇಶವು ಗ್ರಾಮೀಣ ಮಹಿಳೆಯರಿಗೆ ಶೇ.70ರಷ್ಟು ಆದ್ಯತೆ ನೀಡುವುದರ ಮೂಲಕ ಸೇವೆಯನ್ನ ನೀಡುವುದಾಗಿದೆ. ಹಿರಿಯ ನಾಗರೀಕರಿಗೆ ಬಿಪಿ ಶುಗರ್ ಹಲ್ಲು ನೋವು, ಕಣ್ಣು




ಪರೀಕ್ಷೆ,ಚರ್ಮ ರೋಗಿಗಳಿಗೆ ತಜ್ಞ ವೈದ್ಯರಿಂದ ಚಿಕಿತ್ಸೆ ಕೊಡಿಸುವುದರ ಜೊತೆಗೆ ಗರ್ಭಿಣಿ ಮಹಿಳೆಯರಿಗೆ ಉತ್ತಮ ಆರೋಗ್ಯದೃಷ್ಠಿಯಿಂದ ತಜ್ಞ ವೈದ್ಯರಿಂದ ನೇತ್ರ, ದಂತ ತಪಾಸಣೆ ಮತ್ತು ಸ್ತ್ರಿ ರೋಗ ತಜ್ಞರಿಂದ ಮಹಿಳೆಯರ ಆರೋಗ್ಯ ತಪಾಸಣೆ ಮಾಡಿ ಚಿಕಿತ್ಸೆ ನೀಡಲಿದ್ದಾರೆ ಹೆಚ್ಚಿನ ಚಿಕಿತ್ಸೆಯ ಅಗತ್ಯವಿದ್ದಲ್ಲಿ ರಿಮ್ಸ್ ಮತ್ತು ನವೋದಯ ಆಸ್ಪತ್ರೆಗೆ ಕಳುಹಿಸಲಾಗುವುದು ಎಂದು ಪ್ರಾಣ ಪಿಪಿಎಚ್‌ಎಫ್ ಹೆಲ್ತ್ ಕೇರ್ ಸಂಸ್ಥೆಯ ವ್ಯವಸ್ಥಾಪ ಮಲ್ಲೈಕಾ ಅಮೀನ್ ಹೇಳಿದರು. ಆಯುಷ ಮಾನ್ ಭಾರತ ಆರೋಗ್ಯ ವಿಮೆ ಯೋಜನೆಗೆ ನೋಂದಣಿ ಮಾಡಲಾಯಿತು ಕಾರ್ಯಕ್ರಮ ಮುಗಿದ ನಂತರ ಮಹಿಳೆಯರಿಗೆ ಮೆಹಂದಿ ಕಾರ್ಯಕ್ರಮ ನಡೆಯಿತು.

ಸಮುದಾಯ ಅರೋಗ್ಯ ಕೇಂದ್ರದ ವೈದ್ಯರಾದ ಡಾ.ಅರುಣಾ ಮಾಲಿ ಪಾಟೀಲ್, ಡಾ.ಪ್ರವೀಣಕುಮಾರ, ಡಾ.ತಬ್ ಸುಮ್ ನಾರಾ, ಡಾ.ಮಲ್ಲನಗೌಡ ಇದ್ದರು.

Owned, Printed and published by **ANILKUMAR H** from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at **MAA FRIENDS PRINTING PRESS,** Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: **ANILKUMAR H**